# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 81 Issue: | ರಾಯಚೂರು Raichur | 13-09-2026 | ಭಾನುವಾರ Sunday | ಪುಟ: 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ಟೆಸ್ಟ್ ಕ್ರಿಕೆಟ್‌ನಲ್ಲಿ ಇತಿಹಾಸ ಸೃಷ್ಟಿಸಿದ ಜೋ ರೂಟ್; ಸಚಿನ್ ತೆಂಡೂಲ್ಕರ್ ವಿಶ್ವದಾಖಲೆ ಉಡೀಸ್!




# ಭಾರತ-ಚೀನಾ ಸಂಬಂಧ ಸುಧಾರಣೆಗೆ ಹೊಸ ಹೆಜ್ಜೆ

ನವದೆಹಲಿ: ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ಭಾರತಕ್ಕೆ ಆಗಮಿಸಿರುವ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಶನಿವಾರ ದ್ವಿಪಕ್ಷೀಯ ಮಾತುಕತೆ ನಡೆಸಿದ್ದು, ಹಲವು ವರ್ಷಗಳ ಗಡಿ ಉದ್ವಿಗ್ನತೆಯ ಬಳಿಕ ಉಭಯ ರಾಷ್ಟ್ರಗಳ ನಡುವಿನ ಸಂಬಂಧವನ್ನು ಮತ್ತಷ್ಟು ಸ್ಥಿರಗೊಳಿಸುವ ನಿಟ್ಟಿನಲ್ಲಿ ಈ ಭೇಟಿ ಮಹತ್ವ ಪಡೆದುಕೊಂಡಿದೆ. ಕ್ಸಿ ಜಿನ್ ಪಿಂಗ್ ಅವರ ಏಳು ವರ್ಷಗಳ ನಂತರದ ಮೊದಲ ಭಾರತ ಭೇಟಿ ಇದಾಗಿದೆ.



ಬ್ರಿಕ್ಸ್ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ಸೇರಿದಂತೆ ಭಾರತ ಮತ್ತು ಚೀನಾ ಪರಸ್ಪರ ಸಹಕಾರದ ಮೂಲಕ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಕ್ಸಿ ಜಿನ್‌ಪಿಂಗ್ ಪ್ರತಿಪಾದಿಸಿದ್ದಾರೆ. ಭಾರತಚೀನಾ ಸಂಬಂಧವನ್ನು ಕಾರ್ಯತಂತ್ರದ ಹಾಗೂ ದೀರ್ಘಕಾಲೀನ ದೃಷ್ಟಿಕೋನದಿಂದ ನೋಡಬೇಕೆಂಬ ನಿಲುವನ್ನು ಚೀನಾ ಮುಂದಿಟ್ಟಿದೆ. ಪ್ರಧಾನಿ ಮೋದಿ ಮತ್ತು ಕ್ಸಿ ನಡುವಿನ ಮಾತುಕತೆ 50 ನಿಮಿಷಕ್ಕೂ ಹೆಚ್ಚು ಕಾಲ ನಡೆದಿದೆ ಎಂದು ವರದಿಯಾಗಿದೆ.

2020ರ ಗಲ್ವಾನ್ ಕಣಿವೆ ಸಂಘರ್ಷದ ಬಳಿಕ ಭಾರತ ಚೀನಾ ಸಂಬಂಧದಲ್ಲಿ ತೀವ್ರ ಬಿಕ್ಕಟ್ಟು ಉಂಟಾಗಿತ್ತು. ಆ ಬಳಿಕ ಗಡಿಯಲ್ಲಿನ ಉದ್ವಿಗ್ನತೆಯನ್ನು ಕಡಿಮೆ ಮಾಡುವುದು ಮತ್ತು ದ್ವಿಪಕ್ಷೀಯ ಸಂಬಂಧಗಳನ್ನು ಪುನಃ ಸ್ಥಿರಗೊಳಿಸುವ ನಿಟ್ಟಿನಲ್ಲಿ ಎರಡೂ ರಾಷ್ಟ್ರಗಳು ಹಲವು ಹಂತಗಳಲ್ಲಿ ಮಾತುಕತೆ ನಡೆಸಿವೆ. 2024ರ ಅಕ್ಟೋಬರ್‌ನಲ್ಲಿ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ವೇಳೆ ಮೋದಿ ಮತ್ತು ಕ್ಸಿ ಭೇಟಿಯಾಗಿ ಗಡಿ ಪ್ರದೇಶಗಳಲ್ಲಿ ಶಾಂತಿ ಹಾಗೂ ಸ್ಥಿರತೆ ಕಾಪಾಡುವ ಮಹತ್ವವನ್ನು ಒತ್ತಿಹೇಳಿದ್ದರು.

2025ರ ಆಗಸ್ಟ್‌ನಲ್ಲಿ ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಎಸ್‌ಸಿಒ ಶೃಂಗಸಭೆಯ ಸಂದರ್ಭದಲ್ಲಿಯೂ ಮೋದಿ ಕ್ಸಿ ಭೇಟಿಯಾಗಿದ್ದರು. ಆ ವೇಳೆ ಭಾರತ ಮತ್ತು ಚೀನಾ ಅಭಿವೃದ್ಧಿಯ ಪಾಲುದಾರರಾಗಬೇಕೇ ಹೊರತು ಪ್ರತಿಸ್ಪರ್ಧಿಗಳಾಗಬಾರದು ಹಾಗೂ ಭಿನ್ನಾಭಿಪ್ರಾಯಗಳು ವಿವಾದಗಳಾಗಿ ಪರಿವರ್ತನೆಯಾಗದಂತೆ ನೋಡಿಕೊಳ್ಳಬೇಕು ಎಂಬ ಅಭಿಪ್ರಾಯ ವ್ಯಕ್ತವಾಗಿತ್ತು. ಗಡಿ ಪ್ರದೇಶಗಳಲ್ಲಿ ಶಾಂತಿ ಮತ್ತು ನೆಮ್ಮದಿ ಕಾಪಾಡುವುದು ದ್ವಿಪಕ್ಷೀಯ ಸಂಬಂಧಗಳ ಮುಂದಿನ ಬೆಳವಣಿಗೆಗೆ ಅಗತ್ಯ ಎಂದು ಭಾರತ ಒತ್ತಿಹೇಳಿತ್ತು.

ಪ್ರಸ್ತುತ ನವದೆಹಲಿಯಲ್ಲಿ ನಡೆದ ಮಾತುಕತೆಯಲ್ಲಿ ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರ ಮತ್ತು ಜನರ ಸಂಚಾರ ಸಂಪರ್ಕವನ್ನು ವಿಸ್ತರಿಸುವ ಅಗತ್ಯಕ್ಕೆ ಒತ್ತು ನೀಡಲಾಗಿದೆ. ಹಲವು ವರ್ಷಗಳಿಂದ ಹದಗೆಟ್ಟಿದ್ದ ಸಂಬಂಧಗಳಲ್ಲಿ ವಿಶ್ವಾಸವನ್ನು ಮರುಸ್ಥಾಪಿಸುವುದು ಹಾಗೂ ಆರ್ಥಿಕ ಸಹಕಾರವನ್ನು ವೃದ್ಧಿಸುವುದು ಪ್ರಮುಖ ವಿಷಯಗಳಾಗಿವೆ.

ಆದಾಗ್ಯೂ, ಭಾರತಚೀನಾ ನಡುವಿನ ಗಡಿ ವಿವಾದ ಇನ್ನೂ ಸಂಪೂರ್ಣವಾಗಿ ಬಗೆಹರಿದಿಲ್ಲ. ವಾಸ್ತವಿಕ ನಿಯಂತ್ರಣ ರೇಖೆ (ಎಲ್‌ಎಸಿ)ಯಲ್ಲಿನ ಶಾಂತಿ ಮತ್ತು ಸ್ಥಿರತೆ ದ್ವಿಪಕ್ಷೀಯ ಸಂಬಂಧಗಳ ಸಹಜ ಬೆಳವಣಿಗೆಗೆ ಪ್ರಮುಖ ಅಂಶವಾಗಿದೆ ಎಂಬ ನಿಲುವನ್ನು ಭಾರತ ನಿರಂತರವಾಗಿ ಮುಂದಿಟ್ಟಿದೆ. ಗಡಿ ಸಮಸ್ಯೆಯ ಜೊತೆಗೆ ವ್ಯಾಪಾರ ಅಸಮತೋಲನ, ಮಾರುಕಟ್ಟೆ ಪ್ರವೇಶ ಹಾಗೂ ಹೂಡಿಕೆ ಸೇರಿದಂತೆ ಹಲವು ವಿಷಯಗಳು ಉಭಯ ದೇಶಗಳ ಸಂಬಂಧದಲ್ಲಿ ಪ್ರಮುಖವಾಗಿವೆ.

ಕ್ಸಿ ಜಿನ್‌ಪಿಂಗ್ ಅವರು ಕೊನೆಯದಾಗಿ 2019ರಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು. ಆಗ ಚೆನ್ನೈ ಸಮೀಪದ ಮಾಮಲ್ಲಾಪುರಂನಲ್ಲಿ ಪ್ರಧಾನಿ ಮೋದಿ ಅವರೊಂದಿಗೆ ಅನೌಪಚಾರಿಕ ಶೃಂಗಸಭೆ ನಡೆಸಿದ್ದರು. 2020ರ ಗಲ್ವಾನ್ ಸಂಘರ್ಷದ ಬಳಿಕ ಅವರ ಈ ಬಾರಿಯ ಭಾರತ ಭೇಟಿ ಹಾಗೂ ನವದೆಹಲಿಯಲ್ಲಿ ನಡೆದ ಮೋದಿ ಕ್ಸಿ ದ್ವಿಪಕ್ಷೀಯ ಮಾತುಕತೆ ಎರಡೂ ರಾಷ್ಟ್ರಗಳ ನಡುವಿನ ಸಂಬಂಧ ಸುಧಾರಣೆಯ ದೃಷ್ಟಿಯಿಂದ ವಿಶೇಷ ಮಹತ್ವ ಪಡೆದುಕೊಂಡಿವೆ.

ಗಡಿ ಸಮಸ್ಯೆಗಳ ನಡುವೆಯೂ ವ್ಯಾಪಾರ, ಸಂಪರ್ಕ ಹಾಗೂ ಪರಸ್ಪರ ಸಹಕಾರವನ್ನು ವಿಸ್ತರಿಸುವ ಪ್ರಯತ್ನಗಳು ಮುಂದುವರಿದಿರುವ ಹಿನ್ನೆಲೆಯಲ್ಲಿ, ಮೋದಿಕ್ಸಿ ಭೇಟಿ ಭಾರತಚೀನಾ ಸಂಬಂಧವನ್ನು ಮತ್ತಷ್ಟು ಸ್ಥಿರಗೊಳಿಸುವತ್ತ ಯಾವ ರೀತಿಯ ಪರಿಣಾಮ ಬೀರುತ್ತದೆ ಎಂಬುದು ಈಗ ಗಮನ ಸೆಳೆದಿದೆ.

## ರೈತರ ಹಿತವೇ ಮೊದಲ ಆದ್ಯತೆ: ರಾಯಚೂರು ಗ್ರಾಮೀಣ ಭಾಗದ ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳ ಸಭೆ

ರಾಯಚೂರು: ಗ್ರಾಮೀಣ ಪ್ರದೇಶಗಳಲ್ಲಿ ಅಸ್ಥಿರ ವಿದ್ಯುತ್ ಪೂರೈಕೆ, ಕೃಷಿ ಚಟುವಟಿಕೆಗಳಿಗೆ ಉಂಟಾಗುತ್ತಿರುವ ತೊಂದರೆಗಳು ಹಾಗೂ ರೈತರು ಮತ್ತು ಗ್ರಾಮಸ್ಥರು ಎದುರಿಸುತ್ತಿರುವ ವಿವಿಧ ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕೆ ಸಂಬಂಧಿಸಿದಂತೆ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ತಮ್ಮ ಶಾಸಕರ ಕಚೇರಿಯಲ್ಲಿ ಜೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದರು.



ಸಭೆಯಲ್ಲಿ ಗ್ರಾಮೀಣ ಭಾಗದ ವಿವಿಧ ಗ್ರಾಮಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಉಂಟಾಗುತ್ತಿರುವ ವ್ಯತ್ಯಯ, ಕಡಿಮೆ ವೋಲ್ಟೇಜ್, ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ದೊರೆಯದಿರುವುದು, ದುರಸ್ತಿಗೆ ವಿಳಂಬ, ವಿದ್ಯುತ್ ಮೂಲಸೌಕರ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಹಾಗೂ ನಡೆಯುತ್ತಿರುವ ಕಾಮಗಾರಿಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ರೈತರ ಕೃಷಿ ಚಟುವಟಿಕೆಗಳು ಬಹುತೇಕ ವಿದ್ಯುತ್ ಪೂರೈಕೆಯನ್ನೇ ಅವಲಂಬಿಸಿರುವುದರಿಂದ, ಯಾವುದೇ ಕಾರಣಕ್ಕೂ ರೈತರು ವಿದ್ಯುತ್ ಸಮಸ್ಯೆಯಿಂದ ಸಂಕಷ್ಟಕ್ಕೆ ಒಳಗಾಗಬಾರದು. ಗ್ರಾಮೀಣ ಜನಜೀವನಕ್ಕೂ ನಿರಂತರ ವಿದ್ಯುತ್ ಪೂರೈಕೆ ಅತ್ಯಂತ ಅಗತ್ಯವಾಗಿದ್ದು, ಅಧಿಕಾರಿಗಳು ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ಶಾಸಕ ಬಸನಗೌಡ ದದ್ದಲ್ ಸೂಚಿಸಿದರು.

ಈ ಸಂದರ್ಭದಲ್ಲಿ ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಶಾಸಕರು, ಕ್ಷೇತ್ರದಲ್ಲಿ ಪ್ರಸ್ತುತ ಎದುರಾಗಿರುವ ವಿದ್ಯುತ್ ಪೂರೈಕೆ ಸಮಸ್ಯೆಗಳು ಹಾಗೂ ನಡೆಯುತ್ತಿರುವ ಕಾಮಗಾರಿಗಳ ಸ್ಥಿತಿಗತಿ ಕುರಿತು ಮಾಹಿತಿ ಪಡೆದುಕೊಂಡರು. ಬಾಕಿ ಇರುವ ಕಾಮಗಾರಿಗಳಿಗೆ ವೇಗ

2ನೇ ಪುಟಕ್ಕೆ

## ಜಿಲ್ಲೆಯ ರಸ್ತೆ ಮೂಲಸೌಕರ್ಯ ಅಭಿವೃದ್ಧಿಗೆ ಮಹತ್ವದ ಮುನ್ನಡೆ: ಸಂಸದ ಜಿ. ಕುಮಾರ ನಾಯಕ

ರಾಯಚೂರು: ಜಿಲ್ಲೆಯ ರಸ್ತೆ ಮೂಲಸೌಕರ್ಯ ಅಭಿವೃದ್ಧಿಗೆ ಮಹತ್ವದ ಮುನ್ನಡೆಯಾಗಿದ್ದು, NH-748A ರಾಷ್ಟ್ರೀಯ ಹೆದ್ದಾರಿಯ ಕಿ.ಮೀ. 273.4ರಿಂದ 331.33ರವರೆಗಿನ ರಸ್ತೆ ಅಭಿವೃದ್ಧಿ, ವಿಸ್ತರಣೆ ಮತ್ತು ಸುಧಾರಣೆ ಕಾಮಗಾರಿಗೆ ಸಂಬಂಧಿಸಿದಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಭೂಸ್ವಾಧೀನ ಅಧಿಸೂಚನೆ ಹೊರಡಿಸಿದೆ ಎಂದು ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ತಿಳಿಸಿದ್ದಾರೆ.



ಬೆಳಗಾವಿರಾಯಚೂರು ಹೆದ್ದಾರಿಯ ಪ್ಯಾಕೇಜ್-7ರ ಅಂತಿಮ ಅಲೈನ್‌ಮೆಂಟ್ ಬಹುಕಾಲದಿಂದ ವಿಳಂಬವಾಗಿತ್ತು. ಈ ಹಿನ್ನೆಲೆಯಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದೊಂದಿಗೆ ನಿರಂತರ ಸಂಪರ್ಕ ಸಾಧಿಸಿ, ಹಲವು ಬಾರಿ ಮನವಿ ಹಾಗೂ ಅನುಸರಣೆ ನಡೆಸಲಾಗಿತ್ತು. ಇದೀಗ ಭೂಸ್ವಾಧೀನ ಅಧಿಸೂಚನೆ ಪ್ರಕಟವಾಗಿರುವುದರಿಂದ ಹೆದ್ದಾರಿ ಅಭಿವೃದ್ಧಿ ಕಾಮಗಾರಿಯ ಮುಂದಿನ ಪ್ರಕ್ರಿಯೆಗೆ ವೇಗ ದೊರೆತಿದೆ ಎಂದು ಅವರು ಹೇಳಿದ್ದಾರೆ.

ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ರಸ್ತೆ ವಿಸ್ತರಣೆ ಹಾಗೂ ಸುಧಾರಣಾ ಕಾಮಗಾರಿಗಳನ್ನು ತ್ವರಿತವಾಗಿ ಕೈಗೆತ್ತಿಕೊಳ್ಳಬೇಕು. ಕಾಮಗಾರಿಯಲ್ಲಿ ಯಾವುದೇ ವಿಳಂಬವಾಗದಂತೆ ಗುಣಮಟ್ಟಕ್ಕೆ ಆದ್ಯತೆ ನೀಡಿ, ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಈ ಹೆದ್ದಾರಿ ಅಭಿವೃದ್ಧಿಯಿಂದ ರಾಯಚೂರು ಜಿಲ್ಲೆಯ ವಿವಿಧ ಪ್ರದೇಶಗಳ ನಡುವಿನ ಸಂಪರ್ಕ ಸುಗಮವಾಗುವುದರ ಜೊತೆಗೆ, ಉತ್ತರ ಕರ್ನಾಟಕದ ಪ್ರಮುಖ ನಗರಗಳು, ಕೈಗಾರಿಕಾ ಹಾಗೂ ವಾಣಿಜ್ಯ ಕೇಂದ್ರಗಳೊಂದಿಗೆ ಸಂಪರ್ಕ ಮತ್ತಷ್ಟು ಬಲಪಡಲಿದೆ. ಕೃಷಿ ಉತ್ಪನ್ನಗಳ ಸಾಗಣೆ, ವ್ಯಾಪಾರ-ವಹಿವಾಟು ಹಾಗೂ ಸರಕು ಸಾಗಣೆ ವ್ಯವಸ್ಥೆಗೂ ಈ ಯೋಜನೆ ಅನುಕೂಲವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಅಗಲವಾದ ಹಾಗೂ ಉತ್ತಮ ಗುಣಮಟ್ಟದ ಹೆದ್ದಾರಿ ನಿರ್ಮಾಣದಿಂದ ಪ್ರಯಾಣಿಕರ ಸುರಕ್ಷತೆ ಹೆಚ್ಚುವುದರ ಜೊತೆಗೆ, ಸುಗಮ ಮತ್ತು ವೇಗವಾದ ಸಂಚಾರಕ್ಕೆ ಅನುಕೂಲವಾಗಲಿದೆ. ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಉತ್ತಮ ರಸ್ತೆ ಸಂಪರ್ಕ ಅತ್ಯಂತ ಅಗತ್ಯವಾಗಿದ್ದು, ರಾಷ್ಟ್ರೀಯ ಹೆದ್ದಾರಿಗಳ

2ನೇ ಪುಟಕ್ಕೆ

## ಗಣೇಶೋತ್ಸವ ಹಿನ್ನೆಲೆ: ಎಸ್‌ಪಿ ಅರುಣಾಂಗ್ಷು ಗಿರಿ ನೇತೃತ್ವದಲ್ಲಿ ರಾಯಚೂರು ನಗರದಲ್ಲಿ ರೂಟ್ ಮಾರ್ಚ್

ರಾಯಚೂರು, ಸೆ.12: ಮುಂಬರುವ ಗಣೇಶೋತ್ಸವ ಹಾಗೂ ಗಣೇಶ ಮೂರ್ತಿಗಳ ವಿಸರ್ಜನೆ ಹಿನ್ನೆಲೆಯಲ್ಲಿ ನಗರದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆ ಕಾಪಾಡುವ ಉದ್ದೇಶದಿಂದ ಶನಿವಾರ ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಐಪಿಎಸ್ ಅವರ ನೇತೃತ್ವದಲ್ಲಿ ಪೊಲೀಸ್ ಇಲಾಖೆಯಿಂದ ರೂಟ್ ಮಾರ್ಚ್ ನಡೆಸಲಾಯಿತು.



ನಗರದ ಗಂಜ್ ವೃತ್ತದಿಂದ ಸಂಜೆ 4 ಗಂಟೆಗೆ ಆರಂಭವಾದ ರೂಟ್ ಮಾರ್ಚ್, ಚಂದ್ರಮೌಳಿ ವೃತ್ತ, ಪಟೇಲ್ ವೃತ್ತ, ನೇತಾಜಿ ವೃತ್ತ ಹಾಗೂ ತೀನ್ ಕಂದಿಲ್ ಮಾರ್ಗವಾಗಿ ಸಾಗಿತು. ಬಳಿಕ ನಗರದ ಗಣೇಶ ಮೂರ್ತಿಗಳ ವಿಸರ್ಜನಾ ಸ್ಥಳವಾದ ಕಾಸಭಾವಿವರೆಗೆ ರೂಟ್ ಮಾರ್ಚ್ ನಡೆಸುವ ಮೂಲಕ ಪ್ರಮುಖ ಮಾರ್ಗಗಳು ಹಾಗೂ ವಿಸರ್ಜನಾ ಪ್ರದೇಶದಲ್ಲಿನ ಭದ್ರತಾ ವ್ಯವಸ್ಥೆಯನ್ನು ಅವಲೋಕಿಸಲಾಯಿತು.

ಗಣೇಶೋತ್ಸವದ ಸಂದರ್ಭದಲ್ಲಿ ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಸೇರುವ ಸಾಧ್ಯತೆ ಇರುವುದರಿಂದ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಪೊಲೀಸ್ ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ವಿಶೇಷವಾಗಿ ಗಣೇಶ ಮೂರ್ತಿಗಳ ಮೆರವಣಿಗೆ ಸಾಗುವ ಪ್ರಮುಖ ವೃತ್ತಗಳು, ಜನನಿಬಿಡ ಪ್ರದೇಶಗಳು ಹಾಗೂ ವಿಸರ್ಜನಾ ಮಾರ್ಗದಲ್ಲಿ ಸುಗಮ ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ರೂಟ್ ಮಾರ್ಚ್ ಮಹತ್ವ ಪಡೆದುಕೊಂಡಿತು.

ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಅವರು ರೂಟ್ ಮಾರ್ಚ್‌ಗೆ ನೇತೃತ್ವ ವಹಿಸಿ, ಗಣೇಶ ಮೆರವಣಿಗೆ ಸಾಗುವ ಮಾರ್ಗ ಹಾಗೂ ವಿಸರ್ಜನಾ

2ನೇ ಪುಟಕ್ಕೆ

## ಸಾಮಾಜಿಕ ಮಾಧ್ಯಮ ಬಳಕೆಯಲ್ಲಿ ಯುವಕರು ಎಚ್ಚರಿಕೆ ವಹಿಸಬೇಕು: ಬಸವರಾಜ್ ನಾಗಡದಿನ್ನಿ



ರಾಯಚೂರು, ಸೆ.12: ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ ಎಂಬ ಗಾದೆ ಮಾತಿನ ಅರ್ಥವನ್ನು ಇಂದಿನ ಯುವ ಪೀಳಿಗೆ ಅರಿತು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಬಸವರಾಜ್ ನಾಗಡದಿನ್ನಿ ಹೇಳಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವ ಸಂಭ್ರಮಾಚರಣೆ ಅಂಗವಾಗಿ ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ಸಾಮಾಜಿಕ ಮಾಧ್ಯಮಗಳು ಮತ್ತು ಜೆನ್ ಜಿ: ಜಾಗೃತಿಯೋ ಅಥವಾ ಗೊಂದಲವೋ? ವಿಷಯದ ಪದವಿ ವಿದ್ಯಾರ್ಥಿಗಳ ಭಾಷಣ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜೆನ್ ಜಿ ಎಂಬ ಪದ ಇತ್ತೀಚಿನ ದಿನಗಳಲ್ಲಿ ಹೆಚ್ಚು ಪ್ರಭಾವಶಾಲಿಯಾಗಿ ಬಳಕೆಯಾಗುತ್ತಿದೆ. ಶಿಕ್ಷಣವನ್ನು ಸಾರ್ವತ್ರಿಕಗೊಳಿಸಿ ಯುವ ಸಮಾಜವನ್ನು ಕಟ್ಟುವ ಪರಿಕಲ್ಪನೆ ಎಷ್ಟರ ಮಟ್ಟಿಗೆ ಯಶಸ್ವಿಯಾಗುತ್ತದೆ ಎಂಬುದನ್ನು ನೋಡಬೇಕಿದೆ. ರಾಯಚೂರು ರಿಪೋರ್ಟರ್ಸ್ ಗಿಲ್ಡ್ ತನ್ನ ಬೆಳ್ಳಿ ಮಹೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುತ್ತಿದ್ದು, ಇಂತಹ ಸ್ಪರ್ಧೆಗಳ ಆಯೋಜನೆಯಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ವೀರೇಶ್ ರಾಜಗುರು ಮಾತನಾಡಿ, ವಿದ್ಯಾರ್ಥಿಗಳು ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳಂತಹ ಕಾರ್ಯಕ್ರಮಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವಿದ್ಯಾರ್ಥಿಗಳಿಗೆ ಉಪಯುಕ್ತವಾದ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ ಎಂದರು.

ಹಿರಿಯ ಪತ್ರಕರ್ತ ಶಿವಮೂರ್ತಿ ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಅಂಕಗಳಿಕೆಗೆ ಮಾತ್ರ ಸೀಮಿತವಾಗದೆ ಮಾತುಗಾರಿಕೆ ಕೌಶಲ್ಯಕ್ಕೂ ಒತ್ತು ನೀಡಬೇಕು. ಸಂದರ್ಶನಗಳನ್ನು ಎದುರಿಸುವ ಕೌಶಲ್ಯದಲ್ಲಿ ನಮ್ಮ ಭಾಗದ ವಿದ್ಯಾರ್ಥಿಗಳು ಇನ್ನಷ್ಟು ತಯಾರಿ ಮಾಡಿಕೊಳ್ಳಬೇಕಿದೆ. ಶಬ್ದ ಭಂಡಾರ ವೃದ್ಧಿಸಿಕೊಂಡು, ಸರಿಯಾದ ವಾಕ್ಯ ರಚನೆಯೊಂದಿಗೆ ಅಭಿಪ್ರಾಯ

2ನೇ ಪುಟಕ್ಕೆ

## ಸಾರ್ವಜನಿಕರು ಪ್ರಜಾಸೇವಾ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಿ: ತಹಶೀಲ್ದಾರ ಸುರೇಶ ವರ್ಮಾ

ರಾಯಚೂರು. ಸೆ. 12.(ಕರ್ನಾಟಕ ವಾರ್ತೆ):- ಸರಕಾರವೇ ಜನರ ಮನೆ ಬಾಗಿಲಿಗೆ ಬರುತ್ತಿರುವುದರಿಂದ ಸಾರ್ವಜನಿಕರು ಪ್ರಜಾಸೇವೆ ಆಂದೋಲನ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ರಾಯಚೂರು ತಹಶೀಲ್ದಾರ ಸುರೇಶ ವರ್ಮಾ ಹೇಳಿದರು.




ಅವರು ಸೆಪ್ಟೆಂಬ.ೆ 12 ರಂದು ಶನಿವಾರ ತಾಲ್ಲೂಕು ಆಡಳಿತ. ತಾಲ್ಲೂಕು ಪಂಚಾಯತಿ ರಾಯಚೂರು ಇವರ ಸಹಯೋಗದಲ್ಲಿ ರಾಯಚೂರು ನಗರ ಕ್ಷೇತ್ರ ವ್ಯಾಪ್ತಿಯ ಬಿಜ್ಜನಗೇರಾ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾರ್ವಜನಿಕರ ಅಹವಾಲನ್ನು ಸ್ವೀಕರಿಸಿ ಅವರ ಸಮಸ್ಯೆಗಳಿಗೆ ಸ್ಥಳದಲ್ಲಿ ಪರಿಹಾರ ನೀಡುವ ಸಲುವಾಗಿಯೇ ಸರಕಾರ ಈ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ ಹಮ್ಮಿಕೊಂಡಿದೆ ಹಾಗಾಗಿ ನಾವು ಇಂದು ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಸಮಸ್ಯೆಗಳನ್ನು ಆಲಿಸಿ ಅವುಗಳಿಗೆ ಪರಿಹಾರ ನೀಡಲು ಇಲ್ಲಿಗೆ ಬಂದಿದ್ದೆವೆ ಇದರ ಸದುಪಯೋಗ ಎಲ್ಲರಿಗೂ ಆಗಬೇಕು. ಸಂಬಂಧಿಸಿದ ಆಯಾ ಇಲಾಖೆಯ ಅಧಿಕಾರಿಗಳಿಗೆ ತಮ್ಮ ಸಮಸ್ಯೆಗಳನ್ನು ತಿಳಿಸಿ ಸ್ಥಳದಲ್ಲಿ ಅವುಗಳಿಗೆ ಪರಿಹಾರ ಪಡೆಯಬೇಕೆಂದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯಿಂದ ಉಚಿತ ಆರೋಗ್ಯ ತಪಾಸಣೆ ಹಮ್ಮಿಕೊಳ್ಳಲಾಗಿತ್ತು.

ಕೃಷಿ ಹಾಗೂ ಕಾರ್ಮಿಕ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆ ಫಲಾನುಭವಿಗಳಿಗೆ ಸರಕಾರದ ಸೌಲಭ್ಯಗಳ ವಿತರಣೆ ಮಾಡಲಾಯಿತು ಮತ್ತು ಭಾರತ ಜೋಡೊ ಅಭಿಯಾನ ಕಾರ್ಯಕ್ರಮ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಈ ಪ್ರಜಾಸೇವೆ ಆಂದೋಲನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವೃದ್ಧಾಪ್ಯವೇತನ. ಆಧಾರ ಕಾರ್ಡ.

2ನೇ ಪುಟಕ್ಕೆ

## ಸೈಕಲ್ ಯಾತ್ರೆ: ಡಾ. ಬಸವರಾಜ ಎಂ. ಪಾಟೀಲ್ ಕಾರ್ಯಕ್ಕೆ ಎಸ್‌ಪಿ ಅರುಣಾಂಗ್ಷು ಗಿರಿ ಮೆಚ್ಚುಗೆ

ರಾಯಚೂರು: ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಿ ನಶಾಮುಕ್ತ ಭಾರತ ನಿರ್ಮಾಣದ ಸಂದೇಶ ಸಾರುವ ಉದ್ದೇಶದಿಂದ ಡಾ. ಬಸವರಾಜ ಎಂ. ಪಾಟೀಲ್ ಕಳೆದ 29 ದಿನಗಳಿಂದ ಸೈಕಲ್ ಯಾತ್ರೆ ನಡೆಸುತ್ತಿದ್ದು, ಅವರ ಜಾಗೃತಿ ಅಭಿಯಾನಕ್ಕೆ ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಐಪಿಎಸ್ ಕೈಜೋಡಿಸಿ ಬೆಂಬಲ ವ್ಯಕ್ತಪಡಿಸಿದರು.



ಸಮಾಜದಲ್ಲಿ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಡಾ. ಬಸವರಾಜ ಎಂ. ಪಾಟೀಲ್ ಸೈಕಲ್ ಮೂಲಕ ಸಂಚರಿಸುತ್ತಿದ್ದಾರೆ. ವಿಶೇಷವಾಗಿ ಯುವ ಸಮುದಾಯ ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗದಂತೆ ಎಚ್ಚರಿಸುವುದು ಹಾಗೂ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವಂತೆ ಪ್ರೇರೇಪಿಸುವ ಸಂದೇಶವನ್ನು ತಮ್ಮ ಯಾತ್ರೆಯ ಮೂಲಕ ಸಾರುತ್ತಿದ್ದಾರೆ.

ಸತತ 29 ದಿನಗಳಿಂದ ಸೈಕಲ್ ತುಳಿಯುತ್ತಾ ನಶಾಮುಕ್ತ ಸಮಾಜ ನಿರ್ಮಾಣದ ಸಂದೇಶವನ್ನು ಜನರಿಗೆ ತಲುಪಿಸುತ್ತಿರುವ ಅವರ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಮೆಚ್ಚುಗೆ ವ್ಯಕ್ತಪಡಿಸಿದರು. ಸಾಮಾಜಿಕ ಕಳಕಳಿಯೊಂದಿಗೆ ಕೈಗೊಂಡಿರುವ ಇಂತಹ ಜಾಗೃತಿ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ, ಅದರಲ್ಲೂ ಯುವಜನರಲ್ಲಿ ಮಾದಕ ವಸ್ತುಗಳ ವಿರುದ್ಧ ಅರಿವು ಮೂಡಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಮಾದಕ ವಸ್ತುಗಳ ವ್ಯಸನವು ವ್ಯಕ್ತಿಯ ಆರೋಗ್ಯಕ್ಕೆ ಮಾತ್ರವಲ್ಲದೆ ಕುಟುಂಬ ಮತ್ತು ಸಮಾಜದ ಮೇಲೂ ದುಷ್ಪರಿಣಾಮ ಬೀರುತ್ತದೆ. ಯುವಜನರು ದುಶ್ಚಟಗಳಿಂದ ದೂರವಿದ್ದು ಶಿಕ್ಷಣ, ಕ್ರೀಡೆ, ಆರೋಗ್ಯ ಹಾಗೂ ಉತ್ತಮ ಭವಿಷ್ಯ ನಿರ್ಮಾಣದ ಕಡೆಗೆ ಗಮನಹರಿಸಬೇಕು ಎಂಬ ಸಂದೇಶವನ್ನು ಈ ಸಂದರ್ಭದಲ್ಲಿ ನೀಡಲಾಯಿತು.

2ನೇ ಪುಟಕ್ಕೆ

# ಜಿಲ್ಲೆಯಲ್ಲಿ ಡಿಜೆ ಸೌಂಡ್ ನಿಯಮ ಉಲ್ಲಂಘನೆ: 2021ರಿಂದ 2025ರವರೆಗೆ 7 ಪ್ರಕರಣ ದಾಖಲು




ರಾಯಚೂರು: ಜಿಲ್ಲೆಯಲ್ಲಿ 2021ರಿಂದ 2025ರವರೆಗೆ ಡಿಜೆ ಸೌಂಡ್ ಬಳಕೆಗೆ ಸಂಬಂಧಿಸಿದಂತೆ ಒಟ್ಟು 7 ಪ್ರಕರಣಗಳು ದಾಖಲಾಗಿದ್ದು, ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವಷ್ಟು ಅತಿಯಾದ ಶಬ್ದ, ಅನುಮತಿ ಇಲ್ಲದೆ ಧ್ವನಿವರ್ಧಕ ಬಳಕೆ ಹಾಗೂ ರಸ್ತೆ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪಗಳಡಿ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಲಾಗಿದೆ.

ದಾಖಲೆಗಳ ಪ್ರಕಾರ 2021ರಲ್ಲಿ ಡಿಜೆ ಸೌಂಡ್‌ಗೆ ಸಂಬಂಧಿಸಿದ ಯಾವುದೇ ಪ್ರಕರಣ ದಾಖಲಾಗಿಲ್ಲ. 2022ರಲ್ಲಿ ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಒಂದು ಹಾಗೂ ಮಾನ್ವಿ ಪೊಲೀಸ್ ಠಾಣೆಯಲ್ಲಿ ನಾಲ್ಕು ಸೇರಿ ಒಟ್ಟು ಐದು ಪ್ರಕರಣಗಳು ದಾಖಲಾಗಿವೆ. 2025ರಲ್ಲಿ ಸದರ್ ಬಜಾರ್ ಮತ್ತು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಗಳಲ್ಲಿ ತಲಾ ಒಂದರಂತೆ ಎರಡು ಪ್ರಕರಣಗಳು ದಾಖಲಾಗಿವೆ.

2022ರ ಸೆ.2ರಂದು ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 59/2022 ದಾಖಲಾಗಿದ್ದು, ಗಣೇಶ ವಿಸರ್ಜನೆ ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯ ಧ್ವನಿವರ್ಧಕಗಳನ್ನು ಬಳಸಿ ಸಾರ್ವಜನಿಕರಿಗೆ ಕಿರಿಕಿರಿ ಹಾಗೂ ತೊಂದರೆ ಉಂಟುಮಾಡಿದ ಆರೋಪ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಐಪಿಸಿ ಕಲಂ 268, 283, 290 ಹಾಗೂ ಕರ್ನಾಟಕ ಪೊಲೀಸ್ ಕಾಯ್ದೆಯ ಸಂಬಂಧಿತ ಕಲಂಗಳಡಿ ಕ್ರಮ ಕೈಗೊಳ್ಳಲಾಗಿದ್ದು, ಪ್ರಕರಣದಲ್ಲಿ ದಂಡ ವಿಧಿಸಿರುವುದಾಗಿ ಪೊಲೀಸ್ ದಾಖಲೆ ತಿಳಿಸಿದೆ.

ಮಾನ್ವಿ ಪೊಲೀಸ್ ಠಾಣೆಯಲ್ಲಿ 2022ರ ಸೆ.5ರಂದು ಒಂದೇ ದಿನ ಪ್ರಕರಣ ಸಂಖ್ಯೆ 197/2022, 198/2022, 199/2022 ಹಾಗೂ 200/2022 ದಾಖಲಾಗಿದ್ದವು. ಟ್ರ್ಯಾಕ್ಟರ್ ಟ್ರಾಲಿಗಳಲ್ಲಿ ಡಿಜೆ ಸೌಂಡ್ ಬಾಕ್ಸ್‌ಗಳನ್ನು ಅಳವಡಿಸಿಕೊಂಡು ಜೋರಾಗಿ ಧ್ವನಿ ಹೊರಡಿಸುವುದರ ಜೊತೆಗೆ ರಸ್ತೆ ಮಧ್ಯೆ ವಾಹನಗಳನ್ನು ನಿಲ್ಲಿಸಿ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದಡಿ ಪ್ರಕರಣಗಳನ್ನು ದಾಖಲಿಸಲಾಗಿತ್ತು. ಈ ಪ್ರಕರಣಗಳಿಗೆ ಸಂಬಂಧಿಸಿದ ನ್ಯಾಯಾಲಯದ ಪ್ರಕ್ರಿಯೆಗಳು ನಂತರ ಪೂರ್ಣಗೊಂಡಿರುವುದಾಗಿ ದಾಖಲೆಯಲ್ಲಿ ಉಲ್ಲೇಖಿಸಲಾಗಿದೆ.

2025ರ ಆ.30ರಂದು ಸದರ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 85/2025 ದಾಖಲಾಗಿದ್ದು, ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮತಿ ಪಡೆಯದೆ ಸಾರ್ವಜನಿಕ ಸ್ಥಳದಲ್ಲಿ ಡಿಜೆ ಸೌಂಡ್ ಸಿಸ್ಟಮ್ ಬಳಸಿ ಅತಿಯಾದ ಶಬ್ದ ಉಂಟುಮಾಡಿ ಸಾರ್ವಜನಿಕರಿಗೆ ತೊಂದರೆ ಹಾಗೂ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದಡಿ ಬಿಎನ್‌ಎಸ್ ಮತ್ತು ಕರ್ನಾಟಕ ಪೊಲೀಸ್ ಕಾಯ್ದೆಯ ಸಂಬಂಧಿತ ಕಲಂಗಳಡಿ ಪ್ರಕರಣ ದಾಖಲಿಸಲಾಗಿದೆ. ಈ ಪ್ರಕರಣದಲ್ಲಿ ಸೌಂಡ್ ಸಿಸ್ಟಮ್ ಮಾಲೀಕರು, ವಾಹನ ಚಾಲಕರು, ವಾಹನ ಮಾಲೀಕರು ಹಾಗೂ ಯುವಕ ಮಂಡಳಿ ಅಧ್ಯಕ್ಷರು ಸೇರಿದಂತೆ ಹಲವರನ್ನು ಆರೋಪಿಗಳನ್ನಾಗಿ ದಾಖಲಿಸಲಾಗಿದೆ.

ಅದೇ ರೀತಿ 2025ರ ಸೆ.2ರಂದು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 92/2025 ದಾಖಲಾಗಿದೆ. ಕಾಳಿದಾಸ ನಗರದ ಗಣೇಶ ಮಂಡಳಿಗೆ ಸಂಬಂಧಿಸಿದ ಮೆರವಣಿಗೆಯಲ್ಲಿ ಡಿಜೆ ಸೌಂಡ್ ಸಿಸ್ಟಮ್‌ಗಳನ್ನು ರಸ್ತೆಯಲ್ಲಿ ಇಟ್ಟು ಹೆಚ್ಚಿನ ಶಬ್ದ ಉಂಟುಮಾಡಿ ಸಾರ್ವಜನಿಕರಿಗೆ ಕಿರಿಕಿರಿ ಹಾಗೂ ಸಂಚಾರಕ್ಕೆ ಅಡ್ಡಿ ಉಂಟುಮಾಡಿದ ಆರೋಪದಡಿ ಪ್ರಕರಣ ದಾಖಲಿಸಲಾಗಿದೆ. ದಾಖಲೆ ಪ್ರಕಾರ ಈ ಪ್ರಕರಣ ಸಿ.ಸಿ.ನಂ.5065/2025ರಡಿ ನ್ಯಾಯಾಲಯದ ವಿಚಾರಣೆಯಲ್ಲಿದೆ.

ಪೊಲೀಸ್ ಇಲಾಖೆಯ ದಾಖಲೆಗಳು ಡಿಜೆ ಸೌಂಡ್ ಬಳಕೆಯ ವೇಳೆ ನಿಗದಿತ ನಿಯಮಗಳನ್ನು ಪಾಲಿಸುವುದು, ಸಂಬಂಧಪಟ್ಟ ಇಲಾಖೆಯಿಂದ ಅನುಮತಿ ಪಡೆಯುವುದು ಹಾಗೂ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವ ಅಗತ್ಯವನ್ನು ಒತ್ತಿಹೇಳುತ್ತವೆ.

ಅಮೃತ ವಾಣಿ
ಮನಸೊಂದು
ಇದ್ದರೆ ಮಾರ್ಗವಿದೆ,
ನಗು
ಒಂದಿದ್ದರೆ ಸ್ವರ್ಗವಿದೆ.

1584 ನೆಯ ದಿನಕ್ಕೆ
ಏಮ್ಸ್
ಹೋರಾಟ

# ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷೆಯಾಗಿ ರೇಖಾ ಎಸ್.ಎಲ್. ಕೇಶವರೆಡ್ಡಿ ಪದಗ್ರಹಣ



ರಾಯಚೂರು: ನಗರದ ಕರ್ನಾಟಕ ಸಂಘದ ಸಭಾಂಗಣದಲ್ಲಿ ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷೆಯಾಗಿ ಆಯ್ಕೆಯಾದ ರೇಖಾ ಎಸ್. ಎಲ್. ಕೇಶವರೆಡ್ಡಿ ಅವರ ಪದಗ್ರಹಣ ಕಾರ್ಯಕ್ರಮ ನಡೆಯಿತು.

ಕನ್ನಡ ಜಾನಪದ ಪರಿಷತ್ತಿನ ರಾಜ್ಯಾಧ್ಯಕ್ಷ ಜಾನಪದ ಬಾಲಾಜಿ ಅವರು ರೇಖಾ ಕೇಶವರೆಡ್ಡಿ ಅವರನ್ನು ಸನ್ಮಾನಿಸಿ, ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸಂಬಂಧಿಸಿದ ಪ್ರಮಾಣಪತ್ರವನ್ನು ನೀಡಿ ಗೌರವಿಸಿದರು.

ನಂತರ ಮಾತನಾಡಿದ ಜಾನಪದ ಬಾಲಾಜಿ, ನಿತ್ಯ ಜೀವನದ ಮಾತು, ನಡೆ-ನುಡಿ ಮತ್ತು ಸಂಪ್ರದಾಯಗಳಲ್ಲಿಯೇ ಜಾನಪದದ ಅಂಶಗಳನ್ನು ಕಾಣಬಹುದು. ಆದರೆ ಅವುಗಳನ್ನು ಅರಿತುಕೊಳ್ಳುವ ಹಾಗೂ ಮುಂದಿನ ಪೀಳಿಗೆಗೆ ಪರಿಚಯಿಸುವ ಮನಸ್ಸುಗಳು ಕ್ರಮೇಣ ಕಡಿಮೆಯಾಗುತ್ತಿವೆ ಎಂದು ಹೇಳಿದರು.

ಕಾಲಕ್ಕೆ ತಕ್ಕಂತೆ ಮಕ್ಕಳಿಗೂ ಜಾನಪದದ ಅರಿವು ಮೂಡಿಸುವ ಅಗತ್ಯವಿದ್ದು, ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಜಾನಪದ ಸಂಸ್ಕೃತಿ, ಪರಂಪರೆ ಹಾಗೂ ಅದರ ಮಹತ್ವವನ್ನು ಜನರಿಗೆ ತಲುಪಿಸುವ ಕಾರ್ಯವನ್ನು ಪರಿಷತ್ತು ಮಾಡುತ್ತಿದೆ ಎಂದು ತಿಳಿಸಿದರು.

ಶಿಕ್ಷಣ ಇಲಾಖೆಯ ನಿವೃತ್ತ ಅಧಿಕಾರಿ ಇಂದಿರಾ ಮಾತನಾಡಿ, ಜಾನಪದಕ್ಕೆ ಪ್ರಾಚೀನ ಇತಿಹಾಸವಿದೆ. ಆದಿವಾಸಿ ಸಮುದಾಯಗಳ ಜೀವನ ಪದ್ಧತಿಗಳಲ್ಲಿಯೂ ಜಾನಪದ ಸಂಸ್ಕೃತಿಯ ಬೇರುಗಳನ್ನು ಕಾಣಬಹುದು. ಅರಣ್ಯ ಪ್ರದೇಶಗಳಲ್ಲಿ ಮಹಿಳೆಯರು ಮರಗಳಿಗೆ ತೊಟ್ಟಿಲು ಕಟ್ಟಿ ಮಕ್ಕಳನ್ನು ಮಲಗಿಸುವಾಗ ತಮ್ಮದೇ ಶೈಲಿಯಲ್ಲಿ ಹಾಡುತ್ತಿದ್ದ ಜಾನಪದ ಹಾಡುಗಳು ಸಂಸ್ಕೃತಿಯ ಭಾಗವಾಗಿದ್ದವು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಜಾನಪದ ಪರಿಷತ್ತಿನ ಹಿರಿಯರು, ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಎಸ್‌ವಿಎಸ್ ಶಾಲೆಯಲ್ಲಿ ಪರಿಸರ ಸ್ನೇಹಿ ಗಣೇಶ ಆಚರಣೆ ಅಭಿಯಾನ




ಮಾನ್ವಿ: ನಗರದ ರಾಯಚೂರು ರಸ್ತೆಯಲ್ಲಿರುವ ಎಸ್‌ವಿಎಸ್ ಆಕ್ಸ್‌ಫರ್ಡ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆ ಕುರಿತು ವಿದ್ಯಾರ್ಥಿಗಳಿಂದ ಜಾಗೃತಿ ಅಭಿಯಾನ ನಡೆಯಿತು.

ಈ ಸಂದರ್ಭದಲ್ಲಿ ಸ್ಕೌಟ್ಸ್ ಮತ್ತು ಗೈಡ್ ವಿದ್ಯಾರ್ಥಿಗಳು ಹಾಗೂ ಶಾಲೆಯ ಇತರೆ ವಿದ್ಯಾರ್ಥಿಗಳು ಮಣ್ಣಿನಿಂದ ಗಣೇಶ ಮೂರ್ತಿಗಳನ್ನು ತಯಾರಿಸಿ ಪರಿಸರ ಸಂರಕ್ಷಣೆಯ ಮಹತ್ವವನ್ನು ತಿಳಿಸಿದರು. ಜೊತೆಗೆ ಪರಿಸರ ಸ್ನೇಹಿ ಗಣೇಶೋತ್ಸವದ ಕುರಿತು ವಿವಿಧ ಬಿತ್ತಿಪತ್ರಗಳನ್ನು ಪ್ರದರ್ಶಿಸಿ ವಿದ್ಯಾರ್ಥಿಗಳು ಹಾಗೂ ಪಾಲಕರಲ್ಲಿ ಜಾಗೃತಿ ಮೂಡಿಸಿದರು.

ಹಬ್ಬಗಳನ್ನು ಸಂತೋಷ ಮತ್ತು ಸಂಭ್ರಮದಿಂದ ಆಚರಿಸುವುದರ ಜೊತೆಗೆ ಪರಿಸರದ ಮೇಲಿನ ಹೊಣೆಗಾರಿಕೆಯನ್ನು ಮರೆಯಬಾರದು. ಧಾರ್ಮಿಕ ಹಿನ್ನೆಲೆಯ ಹಬ್ಬಗಳ ಆಚರಣೆಯಲ್ಲೂ ಪ್ರಕೃತಿ ಮತ್ತು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಬೇಕು ಎಂಬ ಸಂದೇಶವನ್ನು ವಿದ್ಯಾರ್ಥಿಗಳು ನೀಡಿದರು.

ಇಂದಿನ ದಿನಗಳಲ್ಲಿ ಕಲುಷಿತ ವಾತಾವರಣ ಮತ್ತು ಪರಿಸರ ಹಾನಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ಪೀಳಿಗೆಗಾಗಿ ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂಬ ಆಶಯವನ್ನು ವಿದ್ಯಾರ್ಥಿಗಳು ತಮ್ಮ ಚಟುವಟಿಕೆಗಳ ಮೂಲಕ ವ್ಯಕ್ತಪಡಿಸಿದರು. ಮಣ್ಣಿನ ಗಣೇಶ ಮೂರ್ತಿಗಳ ಬಳಕೆ ಮತ್ತು ಪರಿಸರ ಸ್ನೇಹಿ ಆಚರಣೆ ಮೂಲಕ ಇತರರಿಗೆ ಮಾದರಿಯಾದರು.

ಈ ಸಂದರ್ಭದಲ್ಲಿ ಶಾಲೆಯ ಆಡಳಿತ ಮಂಡಳಿಯ ಅಂಜಾನ್ ರೆಡ್ಡಿ, ಅನುಷಾ ರೆಡ್ಡಿ, ಸ್ಕೌಟ್ಸ್ ದಳ ನಾಯಕ ಮಲಕಣ್ಣ, ವಿಶ್ವನಾಥ್ ಗೌಡ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು, ಮುಖ್ಯ ಗುರುಗಳು, ಶಿಕ್ಷಕರು ಹಾಗೂ ಪಾಲಕರು ಅಭಿಯಾನದಲ್ಲಿ ಭಾಗವಹಿಸಿದ್ದರು.

# ಜನ್ಮೋತ್ಸವ ಚಿತ್ರದ ಟ್ರೈಲರ್ ಇಂದು ಪೂರ್ಣಿಮಾ ಥಿಯೇಟರ್‌ನಲ್ಲಿ ಬಿಡುಗಡೆ




ರಾಯಚೂರು: ಗಣೇಶೋತ್ಸವದ ಭವ್ಯತೆ, ಮಾನವೀಯ ಮೌಲ್ಯಗಳು ಹಾಗೂ ಭಾವನಾತ್ಮಕ ಕಥಾಹಂದರ ಹೊಂದಿರುವ ಜನ್ಮೋತ್ಸವ ಕನ್ನಡ ಚಲನಚಿತ್ರದ ಟ್ರೈಲರ್ ಅನ್ನು ಸೆ.13ರಂದು ನಗರದ ಪೂರ್ಣಿಮಾ ಥಿಯೇಟರ್‌ನಲ್ಲಿ ಅದ್ದೂರಿಯಾಗಿ ಬಿಡುಗಡೆ ಮಾಡಲಾಗುವುದು ಎಂದು ಚಿತ್ರದ ನಿರ್ದೇಶಕ ರಾಮಾಚಾರಿ ತಿಳಿಸಿದರು.

ನಗರದ ಪೂರ್ಣಿಮಾ ಥಿಯೇಟರ್‌ನಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನ್ಮೋತ್ಸವ ಚಿತ್ರವನ್ನು ತಾವು ನಿರ್ದೇಶಿಸಿದ್ದು, ಮಾರುತಿ ಪಿಕ್ಚರ್ಸ್ ಹಾಗೂ ಲೈಟ್ ಬಾಯ್ ಫಿಲಂ ಸಂಸ್ಥೆಗಳು ನಿರ್ಮಾಣ ಮಾಡಿವೆ ಎಂದು ಹೇಳಿದರು.

ಗಣೇಶೋತ್ಸವದ ವೈಭವವನ್ನು ಹಿನ್ನೆಲೆಯಾಗಿಸಿಕೊಂಡು ಮಾನವೀಯ ಮೌಲ್ಯಗಳು, ಸಂಬಂಧಗಳು ಹಾಗೂ ಭಾವನಾತ್ಮಕ ಅಂಶಗಳನ್ನು ಒಳಗೊಂಡ ವಿಭಿನ್ನ ಕಥಾಹಂದರವನ್ನು ಚಿತ್ರ ಹೊಂದಿದೆ. ಪ್ರೇಕ್ಷಕರಿಗೆ ಮನರಂಜನೆಯ ಜೊತೆಗೆ ಉತ್ತಮ ಸಂದೇಶ ನೀಡುವ ಪ್ರಯತ್ನವನ್ನು ಚಿತ್ರದಲ್ಲಿ ಮಾಡಲಾಗಿದೆ ಎಂದು ತಿಳಿಸಿದರು.

ರಾಯಚೂರು ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದ ಸಿನಿಪ್ರೇಮಿಗಳಿಗೆ ಜನ್ಮೋತ್ಸವ ವಿಶೇಷ ಅನುಭವ ನೀಡಲಿದೆ. ಸೆ.13ರಂದು ಸಂಜೆ 5 ಗಂಟೆಗೆ ನಗರದ ಪೂರ್ಣಿಮಾ ಥಿಯೇಟರ್‌ನಲ್ಲಿ ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ನಡೆಯಲಿದ್ದು, ಸಿನಿಪ್ರೇಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರೋತ್ಸಾಹಿಸುವಂತೆ ರಾಮಾಚಾರಿ ಮನವಿ ಮಾಡಿದರು.

# ಸೈಕಲ್ ಯಾತ್ರೆ: ಡಾ. ಬಸವರಾಜ ಎಂ. ಪಾಟೀಲ್ ಕಾರ್ಯಕ್ಕೆ ಎಸ್‌ಪಿ ಅರುಣಾಂಗ್ಷು ಗಿರಿ ಮೆಚ್ಚುಗೆ

ಡಾ. ಬಸವರಾಜ ಎಂ. ಪಾಟೀಲ್ ಅವರೊಂದಿಗೆ ಕೈಜೋಡಿಸಿದ ಎಸ್‌ಪಿ ಅರುಣಾಂಗ್ಷು ಗಿರಿ, ನಶಾಮುಕ್ತ ಭಾರತದಂತಹ ಮಹತ್ವದ ಉದ್ದೇಶಕ್ಕಾಗಿ ಸೈಕಲ್ ಯಾತ್ರೆಯ ಮೂಲಕ ನಿರಂತರವಾಗಿ ಜಾಗೃತಿ ಮೂಡಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಅಭಿನಂದಿಸಿ, ಅವರ ಮುಂದಿನ ಜಾಗೃತಿ ಪಯಣಕ್ಕೆ ಶುಭ ಹಾರೈಸಿದರು.

ಸಾರ್ವಜನಿಕರು ಸಹ ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ಕೈಜೋಡಿಸಿ, ಯುವ ಪೀಳಿಗೆಯನ್ನು ದುಶ್ಚಟಗಳಿಂದ ರಕ್ಷಿಸುವ ಮೂಲಕ ಆರೋಗ್ಯಕರ ಹಾಗೂ ನಶಾಮುಕ್ತ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂಬ ಸಂದೇಶವನ್ನು ನೀಡಲಾಯಿತು.

## ಮೊದಲನೇ ಪುಟದಿಂದ

# ರೈತರ ಹಿತವೇ ಮೊದಲ ಆದ್ಯತೆ: ರಾಯಚೂರು ಗ್ರಾಮೀಣ ಭಾಗದ ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳ ಸಭೆ

ನೀಡಬೇಕು ಮತ್ತು ತುರ್ತು ಸಮಸ್ಯೆಗಳಿಗೆ ಆದ್ಯತೆಯ ಮೇಲೆ ಪರಿಹಾರ ಕಲ್ಪಿಸುವಂತೆ ಸೂಚಿಸಿದರು.

ಇದೇ ವೇಳೆ ಇಂಧನ ಇಲಾಖೆಯ ಕಾರ್ಯದರ್ಶಿ ಗೌರವ್ ಗುಪ್ತಾ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿ, ರಾಯಚೂರು ಗ್ರಾಮೀಣ ಭಾಗದ ರೈತರು ಮತ್ತು ಸಾರ್ವಜನಿಕರು ಎದುರಿಸುತ್ತಿರುವ ವಿದ್ಯುತ್ ಸಮಸ್ಯೆಗಳನ್ನು ಅವರ ಗಮನಕ್ಕೆ ತಂದರು. ಅಗತ್ಯ ಮೂಲಸೌಕರ್ಯ ಕಲ್ಪಿಸುವುದು, ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸುವುದು ಹಾಗೂ ಸಮರ್ಪಕ ವಿದ್ಯುತ್ ಪೂರೈಕೆಗೆ ಸಂಬಂಧಿಸಿದ ಕ್ರಮಗಳನ್ನು ತ್ವರಿತಗೊಳಿಸುವಂತೆ ಮನವಿ ಮಾಡಿದರು.

ಕ್ಷೇತ್ರ ವ್ಯಾಪ್ತಿಯ ಎಲ್ಲಾ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಸಹಾಯಕ ಅಭಿಯಂತರರು ಕಚೇರಿಗೆ ಸೀಮಿತವಾಗದೆ ತಮ್ಮ ವ್ಯಾಪ್ತಿಯ ಗ್ರಾಮಗಳಿಗೆ ನಿಯಮಿತವಾಗಿ ಭೇಟಿ ನೀಡಬೇಕು. ಅಲ್ಲಿನ ಗ್ರಾಮಸ್ಥರು ಮತ್ತು ರೈತರೊಂದಿಗೆ ನೇರವಾಗಿ ಸಂಪರ್ಕ ಸಾಧಿಸಿ, ಸ್ಥಳೀಯವಾಗಿ ಇರುವ ವಿದ್ಯುತ್ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸಬೇಕು ಎಂದು ಶಾಸಕರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿದ್ಯುತ್ ಸಮಸ್ಯೆಗೆ ಸಂಬಂಧಿಸಿದ ದೂರು ಬಂದ ನಂತರ ಅನಗತ್ಯ ವಿಳಂಬ ಮಾಡದೆ ಸಂಬಂಧಿಸಿದ ಸಿಬ್ಬಂದಿಯನ್ನು ಸ್ಥಳಕ್ಕೆ ಕಳುಹಿಸಿ ಕ್ರಮ ಕೈಗೊಳ್ಳಬೇಕು. ರೈತರು ಪದೇಪದೆ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಅವರು ಹೇಳಿದರು.

ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ರೈತರ ಬೆಳೆಗಳ ಮೇಲೆಯೇ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ರೈತರ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡುವ ಮೂಲಕ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಬಂಧಿತ ಮೂಲಸೌಕರ್ಯ ಕಾಮಗಾರಿಗಳನ್ನು ಗುಣಮಟ್ಟದಿಂದ ಮತ್ತು ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ಕ್ಷೇತ್ರದ ಜನರು ಎದುರಿಸುವ ವಿದ್ಯುತ್ ಸಮಸ್ಯೆಗಳಿಗೆ ತಾತ್ಕಾಲಿಕ ಪರಿಹಾರ ನೀಡುವುದಕ್ಕಿಂತ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ಯೋಜಿತ ರೀತಿಯಲ್ಲಿ ಕೆಲಸ ಮಾಡಬೇಕು. ಸಾರ್ವಜನಿಕರಿಂದ ಬರುವ ದೂರುಗಳಿಗೆ ಅಧಿಕಾರಿಗಳು ಜವಾಬ್ದಾರಿಯಿಂದ ಸ್ಪಂದಿಸಬೇಕು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಸಭೆಯಲ್ಲಿ ಜೆಸ್ಕಾಂ ಇಇ ಮೋಹನ್, ಕೆಪಿಟಿಸಿಎಲ್ ಇಇ ಶೈಕ್ ದೌಲತ್, ಸಿಎಲ್‌ಎಂ ಬಸವರಾಜ್, ಎಇಇ ನಟರಾಜ್, ರಾಜೇಶ್ (220 ಕೆವಿ), ರವಿ, ಸೊಹೈಲ್ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಜಿಲ್ಲೆಯ ರಸ್ತೆ ಮೂಲಸೌಕರ್ಯ ಅಭಿವೃದ್ಧಿಗೆ ಮಹತ್ವದ ಮುನ್ನಡೆ: ಸಂಸದ ಜಿ. ಕುಮಾರ ನಾಯಕ

ವಿಸ್ತರಣೆ, ಬೈಪಾಸ್, ಸರ್ವಿಸ್ ರಸ್ತೆ ಹಾಗೂ ಅಂಡರ್‌ಪಾಸ್ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಾಮಗಾರಿಗಳಿಗೆ ಆದ್ಯತೆ ನೀಡುವಂತೆ ಕೇಂದ್ರ ಸರ್ಕಾರದ ಗಮನ ಸೆಳೆಯಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಭೂಸ್ವಾಧೀನ ಅಧಿಸೂಚನೆ ಪ್ರಕಟಿಸುವ ಪ್ರಕ್ರಿಯೆಗೆ ಸಹಕರಿಸಿದ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸಂಸದ ಜಿ. ಕುಮಾರ ನಾಯಕ ಕೃತಜ್ಞತೆ ಸಲ್ಲಿಸಿದ್ದಾರೆ.

ಜಿಲ್ಲೆಯ ರಸ್ತೆ, ರೈಲ್ವೆ ಸೇರಿದಂತೆ ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ತ್ವರಿತಗೊಳಿಸುವ ನಿಟ್ಟಿನಲ್ಲಿ ತಮ್ಮ ಪ್ರಯತ್ನ ಮುಂದುವರಿಯಲಿದೆ ಎಂದು ಅವರು ತಿಳಿಸಿದ್ದಾರೆ.

# ಗಣೇಶೋತ್ಸವ ಹಿನ್ನೆಲೆ: ಎಸ್‌ಪಿ ಅರುಣಾಂಗ್ಷು ಗಿರಿ ನೇತೃತ್ವದಲ್ಲಿ ರಾಯಚೂರು ನಗರದಲ್ಲಿ ರೂಟ್ ಮಾರ್ಚ್

ಸ್ಥಳದ ಭದ್ರತಾ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿದರು. ಮೆರವಣಿಗೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸಂಚಾರ ವ್ಯವಸ್ಥೆ ನಿರ್ವಹಣೆ, ಜನಸಂದಣಿ ನಿಯಂತ್ರಣ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಅಗತ್ಯ ಪೊಲೀಸ್ ಬಂದೋಬಸ್ತ್ ಕೈಗೊಳ್ಳುವ ಕುರಿತು ಗಮನ ಹರಿಸಲಾಯಿತು.

ಗಣೇಶೋತ್ಸವವನ್ನು ಸಾರ್ವಜನಿಕರು ಶಾಂತಿ, ಸೌಹಾರ್ದತೆ ಮತ್ತು ಭಕ್ತಿಭಾವದಿಂದ ಆಚರಿಸಬೇಕು. ಮೆರವಣಿಗೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಪೊಲೀಸ್ ಇಲಾಖೆಯ ಸೂಚನೆ ಮತ್ತು ನಿಯಮಗಳನ್ನು ಪಾಲಿಸುವ ಮೂಲಕ ಕಾನೂನು ಸುವ್ಯವಸ್ಥೆ ಕಾಪಾಡಲು ಸಹಕರಿಸಬೇಕು ಎಂಬ ಸಂದೇಶವನ್ನು ರೂಟ್ ಮಾರ್ಚ್ ಮೂಲಕ ನೀಡಲಾಯಿತು.

ಗಂಜ್ ವೃತ್ತದಿಂದ ಕಾಸಭಾವಿವರೆಗೆ ಪ್ರಮುಖ ರಸ್ತೆಗಳಲ್ಲಿ ಪೊಲೀಸ್ ಸಿಬ್ಬಂದಿಯ ಶಿಸ್ತುಬದ್ಧ ರೂಟ್ ಮಾರ್ಚ್ ಸಾರ್ವಜನಿಕರ ಗಮನ ಸೆಳೆಯಿತು. ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಸುರಕ್ಷತೆಯ ಭಾವನೆ ಮೂಡಿಸುವುದರ ಜೊತೆಗೆ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವ ಚಟುವಟಿಕೆಗಳಿಗೆ ಅವಕಾಶ ನೀಡುವುದಿಲ್ಲ ಎಂಬ ಸಂದೇಶವನ್ನೂ ಪೊಲೀಸ್ ಇಲಾಖೆ ರವಾನಿಸಿತು.

ಗಣೇಶ ಮೂರ್ತಿಗಳ ವಿಸರ್ಜನೆ ಸುಗಮವಾಗಿ ಮತ್ತು ಶಾಂತಿಯುತವಾಗಿ ನಡೆಯುವಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು, ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಸಿದ್ಧತೆ ಮಾಡಿಕೊಂಡಿದೆ.

# ಸಾಮಾಜಿಕ ಮಾಧ್ಯಮ ಬಳಕೆಯಲ್ಲಿ ಯುವಕರು ಎಚ್ಚರಿಕೆ ವಹಿಸಬೇಕು: ಬಸವರಾಜ್ ನಾಗಡದಿನ್ನಿ

ವ್ಯಕ್ತಪಡಿಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಕುಕನೂರು ಮಾತನಾಡಿ, ಜೆನ್ ಜಿ ಯುವ ಸಮುದಾಯದ ದೃಷ್ಟಿಯಲ್ಲಿ ದೇಶದ ಪರಿಕಲ್ಪನೆ ಬಹಳ ಸುಂದರವಾಗಿದೆ. ಜಾತ್ಯತೀತ, ಭ್ರಷ್ಟಾಚಾರರಹಿತ ಮತ್ತು ಪ್ರತಿಭೆ ಆಧಾರಿತ ದೇಶ ನಿರ್ಮಾಣವಾಗಬೇಕು ಎಂಬ ಆಶಯ ಅವರಲ್ಲಿದೆ. ಕಳೆದ 20 ವರ್ಷಗಳಲ್ಲಿ ಸಾಮಾಜಿಕ ಜಾಲತಾಣಗಳು ಜಗತ್ತಿನಾದ್ಯಂತ ದೊಡ್ಡ ಬದಲಾವಣೆಗೆ ಕಾರಣವಾಗಿವೆ. ಆದರೆ, ಸಾಮಾಜಿಕ ಮಾಧ್ಯಮಗಳನ್ನು ಬಳಸುವಾಗ ಯುವಕರು ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಬರುವ ಪ್ರತಿಯೊಂದು ಸಂದೇಶವನ್ನು ಪರಿಶೀಲಿಸಿ, ಸತ್ಯಾಸತ್ಯತೆ ಅರಿತುಕೊಂಡ ನಂತರವೇ ಅನುಸರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ್ ಜಾಗಟಗಲ್ ಮಾತನಾಡಿ, ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಸರಣಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ವಿದ್ಯಾರ್ಥಿಗಳಿಗಾಗಿ ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಪದವಿ ವಿದ್ಯಾರ್ಥಿಗಳು ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮಗಳನ್ನು ಹೇಗೆ ಅರ್ಥೈಸಿಕೊಳ್ಳುತ್ತಿದ್ದಾರೆ ಹಾಗೂ ಅವುಗಳನ್ನು ಯಾವ ರೀತಿಯಲ್ಲಿ ಬಳಸುತ್ತಿದ್ದಾರೆ ಎಂಬ ಕುರಿತು ಚರ್ಚೆ ನಡೆಯಬೇಕೆಂಬ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಹಿರಿಯ ಪತ್ರಕರ್ತರಾದ ರಘುನಾಥ್ ರೆಡ್ಡಿ ಮನ್ಸಲಾಪೂರ, ವೀರನಗೌಡ, ಸುರೇಶ್ ರೆಡ್ಡಿ ಹಾಗೂ ನಿವೃತ್ತ ಶಿಕ್ಷಕ ರಮೇಶ್ ಬೌಯರ್ ಭಾಷಣ ಸ್ಪರ್ಧೆಯ ನಿರ್ಣಾಯಕರಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಗಿಲ್ಡ್ ಕಾರ್ಯಕಾರಿ ಸಮಿತಿ ಸದಸ್ಯ ಖಾನ್ ಸಾಬ್ ಮೋಮಿನ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್, ಅಮರೇಶ್ ಸಜ್ಜನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗಿಲ್ಡ್ ಜಂಟಿ ಕಾರ್ಯದರ್ಶಿ ಶ್ರೀಕಾಂತ್ ಸಾವೂರ್ ಸ್ವಾಗತಿಸಿದರು. ಮಲ್ಲನಗೌಡ ಕಾರ್ಯಕ್ರಮ ಸಂಯೋಜಿಸಿ ನಿರೂಪಿಸಿದರು.

# ಸಾರ್ವಜನಿಕರು ಪ್ರಜಾಸೇವಾ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಿ: ತಹಶೀಲ್ದಾರ ಸುರೇಶ ವರ್ಮಾ

ರೇಷನ್ ಕಾರ್ಡ್ ಸೇರಿದಂತೆ ಇತರೆ ವಿವಿಧ 111 ಅಹವಾಲುಗಳನ್ನು ಸಾರ್ವಜನಿಕರಿಂದ ಸ್ವೀಕರಿಸಿ ಅವುಗಳಿಗೆ ಸ್ಥಳದಲ್ಲಿಯೆ ಪರಿಹಾರ ನೀಡಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಿಜ್ಜನಗೇರಾ ಗ್ರಾಮಸ್ಥರು ಉಪಸ್ಥಿತರಿದ್ದರು.

# ಅಬಕಾರಿ ದಾಳಿ: 24 ಕೆಜಿ ಕ್ಲೋರೋ ಹೈಡ್ರೇಟ್, 215 ಲೀಟರ್ ಸೇಂಧಿ ಜಪ್ತಿ













ರಾಯಚೂರು: ಅಬಕಾರಿ ಇಲಾಖೆಯ ಅಧಿಕಾರಿಗಳು ಸೆ.11ರಂದು ರಾಯಚೂರು ನಗರ ಹಾಗೂ ಸಿಂಗನೋಡಿ ವ್ಯಾಪ್ತಿಯಲ್ಲಿ ಪ್ರತ್ಯೇಕ ಕಾರ್ಯಾಚರಣೆ ನಡೆಸಿ, ಅಕ್ರಮವಾಗಿ ಸಂಗ್ರಹಿಸಲಾಗಿದ್ದ 24 ಕೆಜಿ ಕ್ಲೋರೋ ಹೈಡ್ರೇಟ್ ಹಾಗೂ ಒಟ್ಟು 215 ಲೀಟರ್ ಸೇಂಧಿಯನ್ನು ಜಪ್ತಿ ಮಾಡಿಕೊಂಡು ಪ್ರಕರಣ ದಾಖಲಿಸಿದ್ದಾರೆ.

ಅಬಕಾರಿ ಅಪರ ಆಯುಕ್ತರು (ಜಾರಿ ಮತ್ತು ಅಪರಾಧ), ಕೇಂದ್ರ ಸ್ಥಾನ ಬೆಳಗಾವಿ ಅವರ ಆದೇಶದಂತೆ, ಕಲಬುರಗಿ ವಿಭಾಗದ ಅಬಕಾರಿ ಜಂಟಿ ಆಯುಕ್ತರ ನಿರ್ದೇಶನ, ರಾಯಚೂರು ಜಿಲ್ಲಾ ಅಬಕಾರಿ ಉಪ ಆಯುಕ್ತರ ಮಾರ್ಗದರ್ಶನ ಹಾಗೂ ರಾಯಚೂರು ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಸೆ.11ರಂದು ಮಧ್ಯರಾತ್ರಿ 12.20ರ ಸುಮಾರಿಗೆ ಖಚಿತ ಮಾಹಿತಿ ಮೇರೆಗೆ ರಾಯಚೂರು ನಗರದ ಮೈಲಾರ ನಗರ ಪ್ರದೇಶದ ಸ್ಮಶಾನದ ಪಕ್ಕದ ಚಂದ್ರಬಂಡ ರಸ್ತೆಯ ಆಲಿ ಕಾಲೋನಿಯಲ್ಲಿರುವ ಮನೆಯ ಮೇಲೆ ಅಬಕಾರಿ ಅಧಿಕಾರಿಗಳು ದಾಳಿ ನಡೆಸಿದರು. ದಾಳಿ ವೇಳೆ ಮನೆಯಲ್ಲಿ ಅಕ್ರಮವಾಗಿ ಸಂಗ್ರಹಿಸಲಾಗಿದ್ದ ಸುಮಾರು 24 ಕೆಜಿ ಕ್ಲೋರೋ ಹೈಡ್ರೇಟ್ (ಸಿ.ಎಚ್.) ಪತ್ತೆಯಾಗಿದೆ ಎಂದು ಇಲಾಖೆ ತಿಳಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ತರುಣ ತಂದೆ ಆಂಜನೇಯ ಹಾಗೂ ನರಸಿಂಹಲು ಅಲಿಯಾಸ್ ಬ್ರೂಸ್ ಲೀ ತಂದೆ ಯಲ್ಲಪ್ಪ ಅವರನ್ನು ಆರೋಪಿಗಳೆಂದು ಗುರುತಿಸಲಾಗಿದ್ದು, ದಾಳಿ ವೇಳೆ ಅವರು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಪ್ತಿ ಮಾಡಿದ ವಸ್ತುವನ್ನು ಪಂಚರ ಸಮ್ಮುಖದಲ್ಲಿ ಇಲಾಖೆಯ ವಶಕ್ಕೆ ಪಡೆದುಕೊಂಡು, ಆರೋಪಿಗಳು ಹಾಗೂ ಕೃತ್ಯ ನಡೆದ ಮನೆಯ ಮಾಲೀಕರ ವಿರುದ್ಧ ಅಬಕಾರಿ ಉಪ ನಿರೀಕ್ಷಕರು ಘೋರ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ಪ್ರಥಮ ವರ್ತಮಾನ ವರದಿ ಸಲ್ಲಿಸಿದ್ದಾರೆ.

ಅದೇ ದಿನ ಸಂಜೆ 4.55ರ ಸುಮಾರಿಗೆ ಸಿಂಗನೋಡಿ ಅಬಕಾರಿ ತನಿಖಾ ಠಾಣೆ ವ್ಯಾಪ್ತಿಯಲ್ಲಿ ಅಧಿಕಾರಿಗಳು ಹಾಗೂ ಗೃಹರಕ್ಷಕ ಸಿಬ್ಬಂದಿ ಗಸ್ತಿನಲ್ಲಿದ್ದಾಗ, ತೆಲಂಗಾಣದ ನಂದಿನಿ ಗ್ರಾಮದ ಕಡೆಯಿಂದ ಮಾರೆಮ್ಮ, ಪಾರ್ವತಿ ಹಾಗೂ ರಂಗಮ್ಮ ಎಂಬವರು ಮಾರಾಟ ಮಾಡುವ ಉದ್ದೇಶದಿಂದ ಅಂದಾಜು 50 ಲೀಟರ್ ಸೇಂಧಿಯನ್ನು ಸಾಗಿಸುತ್ತಿದ್ದರೆಂದು ಪತ್ತೆಹಚ್ಚಲಾಗಿದೆ. ಸೇಂಧಿಯನ್ನು ಜಪ್ತಿ ಮಾಡಿಕೊಂಡು ಕರ್ನಾಟಕ ಅಬಕಾರಿ ಕಾಯ್ದೆ1965ರ ಸಂಬಂಧಿತ ಕಲಂಗಳಡಿ ಪ್ರಕರಣ ಸಂಖ್ಯೆ 14/2026-27 ದಾಖಲಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.

ಇದೇ ದಿನ ರಾತ್ರಿ 8.15ರ ಸುಮಾರಿಗೆ ಸಿಂಗನೋಡಿ ವ್ಯಾಪ್ತಿಯಲ್ಲಿ ಮತ್ತೊಂದು ಕಾರ್ಯಾಚರಣೆ ನಡೆಸಿದ ಅಬಕಾರಿ ಸಿಬ್ಬಂದಿ, ನಂದಿನಿ ಗ್ರಾಮದ ಕಡೆಯಿಂದ ನೋಂದಣಿ ಸಂಖ್ಯೆ ಇಲ್ಲದ ಟಿವಿಎಸ್ ಜುಪಿಟರ್ ಸ್ಕೂಟಿಯಲ್ಲಿ ಸುಮಾರು 165 ಲೀಟರ್ ಸೇಂಧಿಯನ್ನು ಮಾರಾಟ ಉದ್ದೇಶಕ್ಕಾಗಿ ಸಾಗಿಸುತ್ತಿದ್ದ ಪ್ರಕರಣವನ್ನು ಪತ್ತೆಹಚ್ಚಿದ್ದಾರೆ.

ಅಧಿಕಾರಿಗಳು ಸೇಂಧಿ ಹಾಗೂ ಸ್ಕೂಟಿಯನ್ನು ವಶಕ್ಕೆ ಪಡೆದುಕೊಂಡಿದ್ದು, ತಿಮ್ಮಪ್ಪ ತಂದೆ ತಿಮ್ಮಪ್ಪ ಹಳ್ಳಿ ಹಾಗೂ ವಾಹನದ ಮಾಲೀಕರ ವಿರುದ್ಧ ಪ್ರಕರಣ ಸಂಖ್ಯೆ 16/2026-27 ದಾಖಲಿಸಿ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ ಎಂದು ಅಬಕಾರಿ ಇಲಾಖೆ ಮಾಹಿತಿ ನೀಡಿದೆ.

# ದಾನಿಗಳು ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿದ ದಾನ ಶಿಕ್ಷಣದ ಅಭಿವೃದ್ಧಿಗೆ ಸಹಕಾರಿ - ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು



ದೇವದುರ್ಗ: ದಾನಿಗಳು ಶೈಕ್ಷಣಿಕ ಕ್ಷೇತ್ರಕ್ಕೆ ಸಹಾಯ ಹಸ್ತ ಚಾಚುವದರಿಂದ ಶಿಕ್ಷಣದ ಅಭಿವೃದ್ಧಿಗೆ ಸಹಕಾರಿಯಾಗಲಿದ್ದು, ದಾನಿಗಳು ಮಾಡುವ ಸೇವೆ ಸಾರ್ಥಕತೆಯನ್ನು ಪಡೆಯುತ್ತದೆ ಎಂದು ಗಬ್ಬೂರು ಶ್ರೀ ಬೂದಿಬಸವೇಶ್ವರ ಮಠದ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು.

ತಾಲೂಕಿನ ಮದರಕಲ್ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರಿಗೆ ಶನಿವಾರ ಶ್ರೀ ಪರ್ವತರೆಡ್ಡಿ ಮಾಲಿ ಪಾಟೀಲ್ ಫೌಂಡೇಶನ್ ನೀಡಿರುವ ಸೈಕಲ್‌ಗಳ ವಿತರಣಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಗ್ರಾಮದಲ್ಲಿ ಉತ್ತಮ ವಾತಾವರಣ, ಪ್ರತಿಭಾವಂತ ಮಕ್ಕಳಿರುವದು ಸಂತಸದ ಸಂಗತಿ. ಆದರೆ ಕೇವಲ ಇಬ್ಬರೇ ಖಾಯಂ ಶಿಕ್ಷಕರಿದ್ದಾರೆ. ಅತಿಥಿ ಶಿಕ್ಷಕರ ಮೇಲೆ ಬೋಧನೆ ಅವಲಂಬಿತವಾಗಿದೆ. ಈ ಶಾಲೆಯಲ್ಲಿ ಶೇ.96ರಷ್ಟು ಎಸ್‌ಎಸ್‌ಎಲ್‌ಸಿ.ಯಲ್ಲಿ ಫಲಿತಾಂಶ ಬಂದಿದೆ. ಎಲ್ಲಾ ವಿಷಯಗಳ ಬೋಧಕರನ್ನು ಒದಗಿಸದರೆ ಶೇ.100ರಷ್ಟು ಫಲಿತಾಂಶ ನಿರೀಕ್ಷಿಸಬಹುದಾಗಿದೆ. ಉತ್ತಮ ಎಂಬ ಹೆಸರಿರುವ ಮುಖ್ಯಗುರು ಉತ್ತಮ ಮಾಲೆಯವರ ಸೇವೆ ಮಾದರಿಯಾಗಿದೆ. ಶಿಕ್ಷಕರನ್ನು ನಿಯೋಜಿಸಲು ಶಿಕ್ಷಣ ಇಲಾಖೆ ಅಧಿಕಾರಿಗಳು ಗಮನ ಹರಿಸಬೇಕೆಂದು ಗಬ್ಬೂರ ಶ್ರೀಗಳು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಅಕ್ಷರ ದಾಸೋಹ ಕಾರ್ಯಕ್ರಮದ ಸಹಾಯಕ ನಿರ್ದೇಶಕ ಬಸವರಾಜ ಕಟ್ಟೀಮನಿ ಮಾತನಾಡಿ, ರಾಜ್ಯ ಸರಕಾರ ಕಲ್ಯಾಣ ಕರ್ನಾಟಕ ಪ್ರದೇಶದ ಶೈಕ್ಷಣಿಕ ಅಭಿವೃದ್ಧಿಗೆ ಅನೇಕ ಕಾರ್ಯಕ್ರಮಗಳನ್ನು, ಯೋಜನೆಗಳನ್ನು ಜಾರಿಗೊಳಿಸಿದೆ. ಮಕ್ಕಳು ಹಾಗೂ ಪಾಲಕರು ಸದುಪಯೋಗಪಡಿಸಿಕೊಳ್ಳಬೇಕು.

ನಮ್ಮಲ್ಲಿ ಶ್ರೀಮಂತರು ಅನೇಕರು ಇದ್ದಾರೆ. ಆದರೆ ದಾನ ಮಾಡುವ ಮನಸ್ಸಿರಬೇಕು. ಆದರೆ ಶ್ರೀ ಪರ್ವತರೆಡ್ಡಿ ಮಾಲಿ ಪಾಟೀಲ್ ಫೌಂಡೇಶನ್ ಮದರಕಲ್‌ನವರು ಈ ಪ್ರೌಢಶಾಲೆಯ 101 ವಿದ್ಯಾರ್ಥಿನಿಯರಿಗೆ ಉಚಿತವಾಗಿ ಸೈಕಲ್‌ಗಳನ್ನು ನೀಡಿರುವದು ಶ್ಲಾಘನೀಯ ಸೇವೆ. ಶಿಕ್ಷಣ ಕ್ಷೇತ್ರಕ್ಕೆ ನೀಡಿದ ದಾನ ಹಾಗೂ ಸಹಕಾರಗಳು ಸಾರ್ಥಕತೆಯನ್ನು ಪಡೆಯುತ್ತವೆ.

ಇದೇ ಶಾಲೆಯಲ್ಲಿ ಕಳೆದ ಬಾರಿ ಎಲ್ಲಾ ವಿದ್ಯಾರ್ಥಿಗಳಿಗೆ ಇದೇ ಫೌಂಡೇಶನ್‌ದಿದ ಉಚಿತವಾಗಿ ಸ್ಕೂಲ್ ಬ್ಯಾಗ್ ಮತ್ತು ನೋಟ್‌ಬುಕ್‌ಗಳನ್ನು ವಿತರಿಸಿರುವ ಮಾಹಿತಿ ಕೇಳಿ ಸಂತೋಷವಾಗಿದೆ.

ಸ್ಪರ್ದಾತ್ಮಕ ಯುಗದಲ್ಲಿ ಮಕ್ಕಳು ನಿರಂತರ ಅಭ್ಯಾಸ ಮಾಡುವದು ಅವಶ್ಯ. ವಿದ್ಯಾರ್ಥಿಗಳು ದಾನಿಗಳು ನೀಡುವ ಸಹಕಾರವನ್ನು ಪಡೆದು ಉತ್ತಮ ಜೀವನ ರೂಪಿಸಿಕೊಳ್ಳಬೇಕೆಂದು ಎಂದು ತಾಲೂಕು ಅಕ್ಷರ ದಾಸೋಹ ಕಾರ್ಯಕ್ರಮದ ಸಹಾಯಕ ನಿರ್ದೇಶಕ ಬಸವರಾಜ ಕಟ್ಟಿಮನಿ ತಿಳಿಸಿದರು.

ರಮೇಶ ಖಾನಾಪೂರ ಸಂಪಾದಕತ್ವದ ನಿತ್ಯ ನೂತನ ಧ್ವನಿ ಪ್ರಕಟಿಸಿದ ಮಧುರಶಿಲೆ ಮುಕುಟ ಎಂಬ ಪರ್ವತರೆಡ್ಡಿ ಮಾಲಿ ಪಾಟೀಲ್‌ರ ಕುರಿತ ವಿಶೇಷ ಸಂಚಿಕೆ ಶ್ರೀಗಳು ಬಿಡುಗಡೆಗೊಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶಾಲೆಯ ಮುಖ್ಯ ಶಿಕ್ಷಕ ಉತ್ತಮ ಮಾಲೆ ಮಾತನಾಡಿ, ಶ್ರೀ ಪರ್ವತರೆಡ್ಡಿ ಮಾಲಿ ಪಾಟೀಲ್ ಫೌಂಡೇಶನ್ ನಮ್ಮ ಶಾಲೆಯ ವಿದ್ಯಾರ್ಥಿಗಳಿಗೆ ನಿರಂತರವಾಗಿ ಶೈಕ್ಷಣಿಕ ಚಟುವಟಿಕೆಗಳಿಗೆ ಪೂರಕವಾದ ಸಾಮಗ್ರಿಗಳನ್ನು ದಾನ ಮಾಡುತ್ತ ಬಂದಿದ್ದು, ಪ್ರಸ್ತುತದಲ್ಲಿ ವಿದ್ಯಾರ್ಥಿನಿಯರಿಗೆ ಸೈಕಲ್ ವಿತರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು ಪ್ರಧಾನ ಕಾರ್ಯದರ್ಶಿ ಬಸವರಾಜ ಬ್ಯಾಗವಾಟ ಪ್ರಾಸ್ತಾವಿಕವಾಗಿ ಮಾತನಾಡಿ, ಫೌಂಡೇಶನನ ಸಂಸ್ಥಾಪಕ ಅಧ್ಯಕ್ಷರಾದ ಶರಣಗೌಡ ಪಿ.ಮಾಲಿ ಪಾಟೀಲ್‌ರು ಒಂದು ದಿನ ರಾಯಚೂರಿನಿಂದ ಬರುವಾಗ ಸುಮಾರು 5 ಗಂಟೆ ಸಮಯದಲ್ಲಿ ಅರಿಷಿಣಿಗಿಗೆ ನಾಲ್ಕಾರು ವಿದ್ಯಾರ್ಥಿನಿಯರು ನಡೆದುಕೊಂಡು ಹೋಗುವುದನ್ನು ಗಮನಿಸಿ, ತಮ್ಮೂರಿನ ಪ್ರೌಢ ಶಾಲೆಯ ಎಲ್ಲ ವಿದ್ಯಾರ್ಥಿನಿಯರಿಗೆ ನಮ್ಮ ತಂದೆಯವರಾದ ಪರ್ವತರೆಡ್ಡಿ ಮಾಲಿ ಪಾಟೀಲ್ ಪುಣ್ಯಸ್ಮರಣೋತ್ಸವದಂಗವಾಗಿ ಸೈಕಲ್ ಕೊಡಬೇಕು. ಅವರು ಯಾರೂ ಶಿಕ್ಷಣದಿಂದ ಹೊರಗುಳಿಯಬಾರದು ಎಂಬ ಸದುದ್ದೇಶದಿಂದ ಈ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದರು.

ವೇದಿಕೆಯಲ್ಲಿ ಶ್ರೀ ಪರ್ವತರೆಡ್ಡಿ ಮಾಲಿ ಪಾಟೀಲ್ ಫೌಂಡೇಶನ್ ಗೌರವಾಧ್ಯಕ್ಷೆ ಶಶಿಕಲಾ ಮಾಲಿ ಪಾಟೀಲ್, ಸಂಸ್ಥಾಪಕ ಅಧ್ಯಕ್ಷ ಶರಣಗೌಡ ಮಾಲಿ ಪಾಟೀಲ್, ನಿರ್ದೇಶಕ ಪ್ರದೀಪ ಮಾಲಿ ಪಾಟೀಲ್, ಶಿಕ್ಷಣ ಸಂಯೋಜಕ ವೆಂಕಟೇಶ ಗಲಗ, ಮುಖಂಡ ಡಾ.ಚನ್ನನಗೌಡ ಪೊಲೀಸ್ ಪಾಟೀಲ್, ಪಿಕಾರ್ಡ ಬ್ಯಾಂಕ್ ನಿರ್ದೇಶಕ ಲಿಂಗನಗೌಡ ದೊಂಡಬಳಿ, ಎಸ್‌ಡಿಎಂಸಿ ಅಧ್ಯಕ್ಷ ಕರಿಯಪ್ಪ, ಉಪಾಧ್ಯಕ್ಷ ದಂಡಪ್ಪ, ಮುಖಂಡ ತಿಮ್ಮನಗೌಡ ಗಣದಿನ್ನಿ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ನರಸಿಂಗರಾವ್ ಸರಕೀಲ್, ಪ್ರಾ.ಶಾಲಾ ಮುಖ್ಯಗುರು ಬಸವರಾಜ ನಾಗರಾಳ, ಉದ್ಯಮಿ ಮಂಜುನಾಥ ಗೌಡ ಶಿವಮೊಗ್ಗ, ಶಿಕ್ಷಕ ಅರವಿಂದ, ಸೇರಿದಂತೆ ಮತ್ತಿತರರಿದ್ದರು.

ಕುಮಾರಿ ಶಾಂಭವಿ ಸಂಗಡಿಗರ ಪ್ರಾರ್ಥನೆ ಗೀತೆಯೊಂದಿಗೆ ಪ್ರಾರಂಭವಾಯಿತು. ಶಿಕ್ಷಕ ಅರವಿಂದ ಅರಿಕೇರಿ ನಿರೂಪಿಸಿದರು.

# ಜೋಳ ಖರೀದಿ ಹಣ ಬಿಡುಗಡೆಗೆ ಆಗ್ರಹ: ಸೆ.15ರಂದು ಪೋತ್ನಾಳದಲ್ಲಿ ಹೆದ್ದಾರಿ ತಡೆಗೆ ರೈತ ಸಂಘ ಎಚ್ಚರಿಕೆ



ರಾಯಚೂರು: ಜಿಲ್ಲೆಯ ವಿವಿಧ ಖರೀದಿ ಕೇಂದ್ರಗಳಿಗೆ ಹಿಂಗಾರು ಜೋಳ ಮಾರಾಟ ಮಾಡಿ ಒಂದು ವರ್ಷ ಕಳೆದರೂ ರೈತರ ಖಾತೆಗಳಿಗೆ ಹಣ ಜಮೆಯಾಗಿಲ್ಲ. ಬರಗಾಲ ಹಾಗೂ ಬೆಳೆ ನಷ್ಟದಿಂದ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಜೋಳ ಮಾರಾಟದ ಹಣವೂ ದೊರೆಯದೆ ಮತ್ತಷ್ಟು ತೊಂದರೆಯಾಗಿದೆ. ಸರ್ಕಾರ ಕೂಡಲೇ ಬಾಕಿ ಹಣವನ್ನು ರೈತರ ಖಾತೆಗಳಿಗೆ ಜಮಾ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಅಮೀನ್‌ಪಾಷಾ ದಿದ್ದಿಗಿ ಒತ್ತಾಯಿಸಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 5 ಸಾವಿರಕ್ಕೂ ಹೆಚ್ಚು ರೈತರಿಗೆ ಜೋಳದ ಹಣ ಪಾವತಿಯಾಗಬೇಕಿದ್ದು, ಸುಮಾರು ₹130 ಕೋಟಿ ಬಾಕಿ ಉಳಿದಿದೆ. ಜೋಳ ಖರೀದಿಸಿದ 15 ದಿನಗಳೊಳಗೆ ರೈತರ ಖಾತೆಗಳಿಗೆ ಹಣ ಜಮಾ ಮಾಡುವುದಾಗಿ ಸರ್ಕಾರ ಭರವಸೆ ನೀಡಿತ್ತು. ಆದರೆ ಒಂದು ವರ್ಷ ಕಳೆದರೂ ಹಣ ಪಾವತಿಯಾಗದಿರುವುದು ರೈತರ ಬಗ್ಗೆ ಸರ್ಕಾರದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ಮಳೆ ಕೊರತೆ ಹಾಗೂ ಬರಗಾಲದಿಂದ ಜಿಲ್ಲೆಯ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ಬೆಳೆಗಳಿಗೆ ಮಾಡಿದ ಖರ್ಚು ವಾಪಸ್ ಬಾರದೆ ಸಾಲದ ಹೊರೆ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಜೋಳ ಮಾರಾಟದಿಂದ ಬರಬೇಕಾದ ಹಣವೂ ಸಕಾಲಕ್ಕೆ ದೊರೆಯದಿರುವುದರಿಂದ ಮುಂದಿನ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕುಟುಂಬದ ದೈನಂದಿನ ಅಗತ್ಯಗಳನ್ನು ಪೂರೈಸಲು ರೈತರು ಪರದಾಡುವಂತಾಗಿದೆ ಎಂದು ಹೇಳಿದರು.

ಜೋಳ ಮಾರಾಟದಿಂದ ಬರುವ ಹಣವನ್ನು ರೈತರು ಮುಂದಿನ ಬೆಳೆಗಾಗಿ ಬೀಜ, ರಸಗೊಬ್ಬರ, ಕೀಟನಾಶಕ, ಕೃಷಿ ಕಾರ್ಮಿಕರ ಕೂಲಿ ಸೇರಿದಂತೆ ವಿವಿಧ ಖರ್ಚುಗಳಿಗೆ ಬಳಸಿಕೊಳ್ಳಬೇಕಾಗಿತ್ತು. ಮಕ್ಕಳ ಶಿಕ್ಷಣ, ಆರೋಗ್ಯ, ಮದುವೆ ಸೇರಿದಂತೆ ಕುಟುಂಬದ ಅಗತ್ಯಗಳನ್ನು ಪೂರೈಸಲು ಕೂಡ ಈ ಹಣದ ಮೇಲೆ ಅವಲಂಬಿತರಾಗಿದ್ದರು. ಹಣ ಪಾವತಿಯಾಗದ ಕಾರಣ ಖಾಸಗಿ ಸಾಲಗಾರರ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದರು.

ರೈತರ ಉತ್ಪನ್ನಗಳನ್ನು ಸರ್ಕಾರ ಖರೀದಿಸಿದ ಬಳಿಕ ನಿಗದಿತ ಅವಧಿಯಲ್ಲಿ ಹಣ ಪಾವತಿಸುವುದು ಅದರ ಜವಾಬ್ದಾರಿಯಾಗಿದೆ. ರೈತರು ತಮ್ಮ ಹಣಕ್ಕಾಗಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಬಾಕಿ ಇರುವ ₹130 ಕೋಟಿ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಹಿಂಗಾರು ಜೋಳ ಮಾರಾಟ ಮಾಡಿರುವ ರೈತರಿಗೆ ಬಾಕಿ ಹಣವನ್ನು ಶೀಘ್ರ ಬಿಡುಗಡೆ ಮಾಡದಿದ್ದರೆ ಸೆ.15ರಂದು ಪೋತ್ನಾಳ ಗ್ರಾಮದಲ್ಲಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಲಾಗುವುದು. ರೈತರ ಸಮಸ್ಯೆ ಬಗೆಹರಿಯುವವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ಅಮೀನ್ ಪಾಷಾ ದಿದ್ದಿಗಿ ಎಚ್ಚರಿಸಿದರು.

ಇದೇ ವೇಳೆ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಕೆರೆ, ಹಳ್ಳ ಹಾಗೂ ಇತರ ನೀರಿನ ಮೂಲಗಳು ಬತ್ತಿಹೋಗಿವೆ. ಜನರು ಕುಡಿಯುವ ನೀರಿಗಾಗಿ ಪರದಾಡುತ್ತಿದ್ದಾರೆ. ಬೇಸಿಗೆಯ ತೀವ್ರತೆ ಹೆಚ್ಚಾಗುವ ಮುನ್ನವೇ ಸರ್ಕಾರ ಹಾಗೂ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಂಡು ಟ್ಯಾಂಕರ್‌ಗಳ ಮೂಲಕವಾದರೂ ನೀರು ಪೂರೈಸಬೇಕು. ಜೊತೆಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರೈತರ ಸಮಸ್ಯೆಗಳ ಕುರಿತು ಸರ್ಕಾರ ಪದೇಪದೇ ಭರವಸೆ ನೀಡುವುದಷ್ಟೇ ಮಾಡುತ್ತಿದೆ. ಶಾಸಕರ ವೇತನ ಪಾವತಿಯಲ್ಲಿ ಸ್ವಲ್ಪ ವಿಳಂಬವಾದರೂ ತಕ್ಷಣ ಧ್ವನಿ ಎತ್ತುವ ಸರ್ಕಾರ, ರೈತರು ಬೆಳೆದ ಬೆಳೆಯನ್ನು ಖರೀದಿಸಿಕೊಂಡು ಹಣ ಪಾವತಿಸಲು ವರ್ಷಗಟ್ಟಲೆ ವಿಳಂಬ ಮಾಡುತ್ತಿರುವುದು ಎಷ್ಟರ ಮಟ್ಟಿಗೆ ನ್ಯಾಯಸಮ್ಮತ ಎಂದು ಪ್ರಶ್ನಿಸಿದರು.

ರೈತರು ಬೆಳೆದ ಬೆಳೆಗೆ ಸೂಕ್ತ ಬೆಲೆ ಹಾಗೂ ಸಮಯಕ್ಕೆ ಸರಿಯಾಗಿ ಹಣ ದೊರೆಯುವುದು ಅವರ ಹಕ್ಕು. ಸರ್ಕಾರ ರೈತರನ್ನು ಕೇವಲ ಮತದಾರರಾಗಿ ನೋಡದೆ ಅನ್ನದಾತರಾಗಿ ಗೌರವಿಸಿ, ಅವರ ಸಮಸ್ಯೆಗಳಿಗೆ ತುರ್ತು ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಮನಗೌಡ, ರಾಜಶೇಖರಗೌಡ, ನಾಗನಗೌಡ, ಯಲ್ಲಪ್ಪ ಪೋತ್ನಾಳ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

# ಗಣೇಶೋತ್ಸವಕ್ಕೆ ಕಟ್ಟುನಿಟ್ಟಿನ ಭದ್ರತೆ: 48 ವಿಸರ್ಜನಾ ಸ್ಥಳಗಳು ಸೂಕ್ಷ್ಮ ಕೇಂದ್ರಗಳು ಎಸ್ಪಿ ಅರುಣಾಂಗ್ಷು ಗಿರಿ



ರಾಯಚೂರು, ಸೆ.12: ರಾಯಚೂರು ಜಿಲ್ಲೆಯಲ್ಲಿ ಗಣೇಶೋತ್ಸವದ ಹಿನ್ನೆಲೆಯಲ್ಲಿ ಇದುವರೆಗೆ 2,578 ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿರುವುದು ವರದಿಯಾಗಿದ್ದು, ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ನಾಳೆಯವರೆಗೂ ಅವಕಾಶವಿದೆ. ಜಿಲ್ಲೆಯಲ್ಲಿ ಗಣೇಶೋತ್ಸವ ಶಾಂತಿಯುತವಾಗಿ ನಡೆಯಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದು, ಕೋಮು ಸೌಹಾರ್ದತೆಗೆ ಧಕ್ಕೆ ತರುವ ಅಥವಾ ಶಾಂತಿ ಸುವ್ಯವಸ್ಥೆಗೆ ಭಂಗ ಉಂಟುಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಐಪಿಎಸ್ ಎಚ್ಚರಿಸಿದರು.

ನಗರದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಈಗಾಗಲೇ 148 ಶಾಂತಿ ಸಭೆಗಳನ್ನು ನಡೆಸಲಾಗಿದೆ. ರಾಯಚೂರು ನಗರ ಸೇರಿದಂತೆ ವಿವಿಧ ತಾಲೂಕು ಹಾಗೂ ಗ್ರಾಮಗಳಲ್ಲಿ ವಿವಿಧ ಸಮುದಾಯಗಳ ಮುಖಂಡರು, ಗಣೇಶ ಮಂಡಳಿಗಳ ಪದಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಮಂಡಳಿಗಳಿಂದ ಮುಚ್ಚಳಿಕೆ ಪತ್ರಗಳನ್ನು ಪಡೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲೆಯ ವಿವಿಧ ತಾಲೂಕುಗಳ 19 ಗ್ರಾಮಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ನಿರ್ಬಂಧ ವಿಧಿಸಲಾಗಿದೆ. ಜಿಲ್ಲೆಯಲ್ಲಿ ಪ್ರಚಲಿತದಲ್ಲಿರುವ 1,557 ರೌಡಿ ಆಸಾಮಿಗಳ ಪೈಕಿ 1,454 ಜನರ ವಿರುದ್ಧ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಅವರಲ್ಲಿ 1,124 ಜನರಿಂದ ತಾಲೂಕು ದಂಡಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ಅಧಿಕಾರಿಗಳ ಮುಂದೆ ಮುಚ್ಚಳಿಕೆ ಪತ್ರ ಬರೆಯಿಸಿಕೊಳ್ಳಲಾಗಿದೆ ಎಂದರು.

19 ರೌಡಿ ಆಸಾಮಿಗಳನ್ನು ಒಂದು ದಿನದ ಮಟ್ಟಿಗೆ ಜೈಲಿಗೆ ಕಳುಹಿಸಲಾಗಿದ್ದು, ಇನ್ನೂ 23 ಜನರ ವಿರುದ್ಧ ಗಡಿಪಾರು ಕ್ರಮ ಕೈಗೊಂಡು ಚಿಕ್ಕಮಗಳೂರು, ದಕ್ಷಿಣ ಕನ್ನಡ ಹಾಗೂ ವಿಜಯನಗರ ಜಿಲ್ಲೆಗಳಿಗೆ ಕಳುಹಿಸಲಾಗಿದೆ. ಗಡಿಪಾರು ಮಾಡಿರುವವರ ಹಾಜರಾತಿಯನ್ನು ಕಡ್ಡಾಯವಾಗಿ ಪಡೆಯುವ ಕುರಿತು ಇಂದು ಅಥವಾ ನಾಳೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಒಟ್ಟು 16,733 ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಗಣೇಶ ಮೂರ್ತಿ ವಿಸರ್ಜನೆ ನಡೆಯುವ ಸ್ಥಳಗಳ ಪೈಕಿ 48 ಸ್ಥಳಗಳನ್ನು ವಿಶೇಷ ಸೂಕ್ಷ್ಮ ಕೇಂದ್ರಗಳೆಂದು ಗುರುತಿಸಲಾಗಿದ್ದು, ಅಲ್ಲಿ ಹೆಚ್ಚುವರಿ ಪೊಲೀಸ್ ಭದ್ರತೆ ಒದಗಿಸಲಾಗುವುದು. ಯಾವುದೇ ಅಹಿತಕರ ಘಟನೆ ನಡೆಯದಂತೆ ಎಲ್ಲ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಗಣೇಶೋತ್ಸವದ ಬಂದೋಬಸ್ತ್‌ಗಾಗಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ, ಗೃಹರಕ್ಷಕ ದಳದ 500 ಸಿಬ್ಬಂದಿ, ಸಶಸ್ತ್ರ ಮೀಸಲು ಪಡೆಯ 10 ತುಕಡಿಗಳು, ಕೆಎಸ್‌ಆರ್‌ಪಿಯ 6 ತುಕಡಿಗಳು ಹಾಗೂ ಎಎಸ್‌ಸಿಯ ಒಂದು ತಂಡ ಸೇರಿದಂತೆ ಅಗತ್ಯ ಪ್ರಮಾಣದ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.

ಗಣೇಶೋತ್ಸವ ಸಂದರ್ಭದಲ್ಲಿ ಮಾದಕ ದ್ರವ್ಯ ಅಥವಾ ಅಮಲು ಪದಾರ್ಥ ಸೇವಿಸಿ ವಾಹನ ಚಲಾಯಿಸುವವರು, ಬೈಕ್ ವೀಲಿಂಗ್ ಮಾಡುವವರು, ಮಹಿಳೆಯರು, ಮಕ್ಕಳು ಹಾಗೂ ವೃದ್ಧರಿಗೆ ತೊಂದರೆ ನೀಡುವವರು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಗಣೇಶ ಮಂಟಪ ನಿರ್ಮಾಣಕ್ಕೆ ಮಹಾನಗರ ಪಾಲಿಕೆ, ವಿದ್ಯುತ್ ಸಂಪರ್ಕಕ್ಕೆ ಜೆಸ್ಕಾಂ, ಅಗತ್ಯ ಅನುಮತಿಗೆ ಸಂಬಂಧಿಸಿದ ಇಲಾಖೆ ಹಾಗೂ ಧ್ವನಿವರ್ಧಕ ಮತ್ತು ಮೆರವಣಿಗೆಗೆ ಪೊಲೀಸ್ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಗಣೇಶ ಮಂಟಪಗಳಲ್ಲಿ ಬೆಳಿಗ್ಗೆ 6ರಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಧ್ವನಿವರ್ಧಕ ಬಳಸಬೇಕು. ರಾತ್ರಿ 10ರಿಂದ ಬೆಳಿಗ್ಗೆ 6ರವರೆಗೆ ಧ್ವನಿವರ್ಧಕ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಸುಪ್ರೀಂ ಕೋರ್ಟ್ ಆದೇಶ, ರಾಜ್ಯ ಸರ್ಕಾರದ ಸುತ್ತೋಲೆ ಹಾಗೂ ಕರ್ನಾಟಕ ಪೊಲೀಸ್ ಕಾಯ್ದೆಯ ಕಲಂ 37ರ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗಣೇಶ ಮಂಟಪಗಳು ಹಾಗೂ ಮೆರವಣಿಗೆಗಳಲ್ಲಿ ಅಶ್ಲೀಲ ಚಿತ್ರಗೀತೆಗಳು, ಕೋಮುಭಾವನೆ ಕೆರಳಿಸುವ ಹಾಡುಗಳು, ಘೋಷಣೆಗಳು ಅಥವಾ ಭಾಷಣಗಳನ್ನು ಪ್ರಸಾರ ಮಾಡಬಾರದು. ಇಂತಹ ಘಟನೆಗಳು ಕಂಡುಬಂದಲ್ಲಿ ಧ್ವನಿವರ್ಧಕ ಸೇರಿದಂತೆ ಸಂಬಂಧಿತ ಸ್ವತ್ತುಗಳನ್ನು ಸ್ಥಳದಲ್ಲಿಯೇ ಜಪ್ತಿ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗಣೇಶ ಮಂಡಳಿಯವರು ಪ್ರತಿಷ್ಠಾಪನೆಯ ದಿನದಿಂದ ವಿಸರ್ಜನೆಯ ದಿನದವರೆಗೆ ಪ್ರತಿದಿನ ಪಾಳಿಯಂತೆ ನಾಲ್ವರು ಸ್ವಯಂಸೇವಕರನ್ನು ನೇಮಿಸಿಕೊಳ್ಳಬೇಕು. ಗಣೇಶ ಮಂಟಪದ ಮುಂದೆ ಅಥವಾ ಮೆರವಣಿಗೆಯಲ್ಲಿ ಸಾರ್ವಜನಿಕರು ಅಮಲು ಪದಾರ್ಥ ಸೇವಿಸಿ ನೃತ್ಯ ಮಾಡುವುದನ್ನು ಮಂಡಳಿಯ ಪದಾಧಿಕಾರಿಗಳು ತಡೆಗಟ್ಟಿ ಕೂಡಲೇ ಪೊಲೀಸರ ಗಮನಕ್ಕೆ ತರಬೇಕು. ಮಂಟಪದಲ್ಲಿ ಆಕಸ್ಮಿಕ ಬೆಂಕಿ ಅವಘಡ ಸಂಭವಿಸಿದಲ್ಲಿ ಬಳಸಲು ನೀರು, ಮರಳು ಸೇರಿದಂತೆ ಅಗ್ನಿಶಾಮಕ ವ್ಯವಸ್ಥೆ ಹಾಗೂ ಪ್ರಥಮ ಚಿಕಿತ್ಸಾ ಕಿಟ್‌ಗಳನ್ನು ಕಡ್ಡಾಯವಾಗಿ ಇಟ್ಟುಕೊಳ್ಳಬೇಕು ಎಂದು ಸೂಚಿಸಿದರು.

ಗಣೇಶ ಮೂರ್ತಿಗಳ ಮೆರವಣಿಗೆಯನ್ನು ಪೊಲೀಸ್ ಇಲಾಖೆಯಿಂದ ಅನುಮತಿ ಪಡೆದ ಮಾರ್ಗದಲ್ಲಿಯೇ ನಡೆಸಬೇಕು. ಅನುಮತಿ ಇಲ್ಲದ ಮಾರ್ಗಗಳಲ್ಲಿ ಮೆರವಣಿಗೆ ನಡೆಸುವಂತಿಲ್ಲ. ಮೆರವಣಿಗೆಯಲ್ಲಿ ಕರ್ಕಶ ವಾದ್ಯಗಳ ಬಳಕೆ, ಬೆಂಕಿ ಆಟಗಳ ಪ್ರದರ್ಶನ ಹಾಗೂ ಕತ್ತಿ, ಖಡ್ಗ, ತಲವಾರ, ಈಟಿ, ಭರ್ಚಿ ಸೇರಿದಂತೆ ಅಪಾಯಕಾರಿ ಆಯುಧಗಳನ್ನು ಪ್ರದರ್ಶಿಸುವುದು ಅಥವಾ ಬಳಸುವುದು ಸಂಪೂರ್ಣ ನಿಷೇಧಿಸಲಾಗಿದೆ ಎಂದು ಹೇಳಿದರು.

ಕೋಮು ಸೌಹಾರ್ದತೆಗೆ ಧಕ್ಕೆ ತರುವ ಅಥವಾ ಪ್ರಚೋದನಕಾರಿ ಅಂಶಗಳನ್ನು ಒಳಗೊಂಡ ಬ್ಯಾನರ್‌ಗಳನ್ನು ಮುದ್ರಿಸದಂತೆ ಪ್ರಿಂಟರ್‌ಗಳೊಂದಿಗೆ ಈಗಾಗಲೇ ಸಭೆ ನಡೆಸಿ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಾಮಾಜಿಕ ಜಾಲತಾಣಗಳ ಮೇಲೆಯೂ ಪೊಲೀಸ್ ಇಲಾಖೆ ಹದ್ದಿನ ಕಣ್ಣಿಟ್ಟಿದೆ ಎಂದು ತಿಳಿಸಿದರು.

ಗಣೇಶೋತ್ಸವವನ್ನು ಎಲ್ಲರೂ ಸೌಹಾರ್ದಯುತವಾಗಿ, ಶಾಂತಿಯುತವಾಗಿ ಹಾಗೂ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಆಚರಿಸಬೇಕು. ಪೊಲೀಸ್ ಇಲಾಖೆಯ ಸೂಚನೆಗಳು ಮತ್ತು ಕಾನೂನು ನಿಯಮಗಳನ್ನು ಪಾಲಿಸುವ ಮೂಲಕ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಮನವಿ ಮಾಡಿದರು.

# ಹಿರೇಕೋಟ್ನೆಕಲ್ ಗ್ರಾಮದಲ್ಲಿ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ



ಮಾನ್ವಿ: ತಾಲೂಕಿನ ಹಿರೇಕೋಟ್ನೆಕಲ್ ಗ್ರಾಮದ ನಾಡಕಚೇರಿ ಆವರಣದಲ್ಲಿ ತಾಲೂಕು ಆಡಳಿತ ವತಿಯಿಂದ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ2026 ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಹಂಪಯ್ಯ ನಾಯಕ, ಸರ್ಕಾರದ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ತಾಲೂಕಿನ ಹೋಬಳಿ ಮಟ್ಟದಲ್ಲಿ ಪ್ರತಿ ತಿಂಗಳ ಮೊದಲ ಹಾಗೂ ನಾಲ್ಕನೇ ಶನಿವಾರ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಸಾರ್ವಜನಿಕರು ತಮ್ಮ ವಿವಿಧ ಇಲಾಖೆಗಳ ಸಂಬಂಧಿತ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಿದಲ್ಲಿ, ಸಂಬಂಧಿಸಿದ ತಾಲೂಕು ಮಟ್ಟದ ಅಧಿಕಾರಿಗಳು ಸ್ಥಳದಲ್ಲೇ ಪರಿಶೀಲಿಸಿ ಸಾಧ್ಯವಾದಷ್ಟು ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲಿದ್ದಾರೆ ಎಂದು ತಿಳಿಸಿದರು.

ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಮಾತನಾಡಿ, ಸಾರ್ವಜನಿಕರು ಸರ್ಕಾರದ ವಿವಿಧ ಸೇವೆಗಳನ್ನು ಸುಲಭವಾಗಿ ಪಡೆದುಕೊಳ್ಳಲು ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಂಜೂರಾದ ಮಾಸಿಕ ವೇತನ ಪ್ರಮಾಣಪತ್ರಗಳು, ಭಾಗ್ಯಲಕ್ಷ್ಮಿ ಖಾತೆ ಪುಸ್ತಕಗಳು ಸೇರಿದಂತೆ ವಿವಿಧ ಇಲಾಖೆಗಳ ಫಲಾನುಭವಿಗಳಿಗೆ ಶಾಸಕ ಹಂಪಯ್ಯ ನಾಯಕ ಪ್ರಮಾಣಪತ್ರ ಹಾಗೂ ಆದೇಶ ಪತ್ರಗಳನ್ನು ವಿತರಿಸಿದರು.

ಪ್ರಜಾಸೇವಾ ಆಂದೋಲನದಲ್ಲಿ ಕಂದಾಯ ಇಲಾಖೆಗೆ 13, ತಾಲೂಕು ಪಂಚಾಯಿತಿಗೆ 7, ಲೋಕೋಪಯೋಗಿ ಇಲಾಖೆಗೆ 1, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 3, ವಿಕಲಚೇತನರ ಇಲಾಖೆಗೆ 1, ಅಲ್ಪಸಂಖ್ಯಾತರ ಇಲಾಖೆಗೆ 2, ಸಮಾಜ ಕಲ್ಯಾಣ ಇಲಾಖೆಗೆ 1, ಅಬಕಾರಿ ಇಲಾಖೆಗೆ 2 ಹಾಗೂ ಕೃಷಿ ಇಲಾಖೆಗೆ 1 ಅರ್ಜಿ ಸೇರಿದಂತೆ ಒಟ್ಟು 31 ಅರ್ಜಿಗಳು ಸಾರ್ವಜನಿಕರಿಂದ ಸಲ್ಲಿಕೆಯಾಗಿವೆ.

ಈ ಸಂದರ್ಭದಲ್ಲಿ ಗ್ರೇಡ್2 ತಹಶೀಲ್ದಾರ್ ಅಬ್ದುಲ್ ವಾಹಿದ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹಮ್ಮದ್, ನಯೋಪ್ರ ಅಧ್ಯಕ್ಷ ಅಬ್ದುಲ್ ಗಾಫೂರ್ ಸಾಬ್, ಹಿರೇಕೋಟ್ನೆಕಲ್ ನಾಡ ತಹಶೀಲ್ದಾರ್ ಮಲ್ಲಿಕಾರ್ಜುನ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ., ಪಶು ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕ ಡಾ. ಬಸವರಾಜ ಹಿರೇಮಠ, ತಾಲೂಕು ಆರೋಗ್ಯಾಧಿಕಾರಿ ಡಾ. ಶರಣ ಬಸವರಾಜ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಭಾಗಯ್ಯ ನಾಯಕ, ವಲಯ ಅರಣ್ಯಾಧಿಕಾರಿ ಪುರುಷೋತ್ತಮ ರಾವ್ ಜಿ., ಅಗ್ನಿಶಾಮಕ ಠಾಣಾಧಿಕಾರಿ ರಂಗಪ್ಪ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಬಸವಶ್ರೀ ಶಾಲೆಯಲ್ಲಿ ಪರಿಸರ ಸ್ನೇಹಿ ಗಣೇಶೋತ್ಸವ



ರಾಯಚೂರು: ಶಾಲೆಗಳು ಕೇವಲ ಪಠ್ಯ ಬೋಧನೆಗೆ ಸೀಮಿತವಾಗದೆ, ಅನುಭವದ ಮೂಲಕ ಮಕ್ಕಳಿಗೆ ಜೀವನ ಪಾಠ ಕಲಿಸುವ ಕೇಂದ್ರಗಳಾಗಬೇಕು ಎಂಬ ಉದ್ದೇಶದಿಂದ ನಗರದ ಸುಗುಣ ಶಿಕ್ಷಣ ಸಂಸ್ಥೆಯ ಬಸವಶ್ರೀ ಶಾಲೆಯಲ್ಲಿ ಗಣೇಶ ಹಬ್ಬದ ಅಂಗವಾಗಿ ಪರಿಸರ ಸ್ನೇಹಿ ಗಣೇಶೋತ್ಸವ ಆಚರಿಸಲಾಯಿತು.

ಪರಿಸರಕ್ಕೆ ಹಾನಿ ಉಂಟುಮಾಡುವ ಬಣ್ಣಬಣ್ಣದ ಹಾಗೂ ದುಬಾರಿ ಗಣೇಶ ವಿಗ್ರಹಗಳ ಬದಲಾಗಿ, ವಿದ್ಯಾರ್ಥಿಗಳು ಸ್ವತಃ ಮಣ್ಣಿನಿಂದ ಸರಳ ಗಣೇಶ ವಿಗ್ರಹಗಳನ್ನು ತಯಾರಿಸಿದರು. ಈ ಮೂಲಕ ಪರಿಸರ ಸ್ನೇಹಿ ಹಬ್ಬ ಆಚರಣೆಯ ಮಹತ್ವವನ್ನು ಮಕ್ಕಳಿಗೆ ತಿಳಿಸಿಕೊಡಲಾಯಿತು.

ವಿದ್ಯಾರ್ಥಿಗಳು ಹೆಚ್ಚಿನ ಆಸಕ್ತಿಯಿಂದ ಮಣ್ಣಿನ ಗಣೇಶ ವಿಗ್ರಹ ತಯಾರಿಕೆಯಲ್ಲಿ ಭಾಗವಹಿಸಿದ್ದು, ತಾವು ತಯಾರಿಸಿದ ವಿಗ್ರಹಗಳನ್ನೇ ಮನೆಗಳಲ್ಲಿ ಪೂಜೆಗೆ ಬಳಸುವಂತೆ ಅವರಿಗೆ ಮನವರಿಕೆ ಮಾಡಲಾಯಿತು.

ಭಾರತದ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಸಾಮಾನ್ಯ ಜನರನ್ನು ಒಗ್ಗೂಡಿಸುವ ಉದ್ದೇಶದಿಂದ ಬಾಲಗಂಗಾಧರ ತಿಲಕರು ಸಾರ್ವಜನಿಕ ಗಣೇಶೋತ್ಸವಕ್ಕೆ ಚಾಲನೆ ನೀಡಿದ ಹಿನ್ನೆಲೆ ಹಾಗೂ ಗಣೇಶ ಹಬ್ಬದ ಸಾಂಸ್ಕೃತಿಕ ಮತ್ತು ಪರಂಪರೆಯ ಮಹತ್ವದ ಕುರಿತು ಶಿಕ್ಷಕರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ಬಾಲ್ಯದಲ್ಲೇ ಉತ್ತಮ ಹವ್ಯಾಸಗಳು ಮತ್ತು ಪರಿಸರ ಕಾಳಜಿಯನ್ನು ಬೆಳೆಸಿಕೊಂಡರೆ, ಅದು ಮಕ್ಕಳ ಭವಿಷ್ಯವನ್ನು ಉತ್ತಮವಾಗಿ ರೂಪಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಲಾಯಿತು.

ಮಕ್ಕಳು ಮತ್ತು ಶಿಕ್ಷಕರು ಒಟ್ಟಾಗಿ ಮಣ್ಣಿನ ಗಣೇಶ ವಿಗ್ರಹಗಳನ್ನು ತಯಾರಿಸಿ ಸಂಭ್ರಮಿಸುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಿದರು.

# ಯೋಗದಿಂದ ಆರೋಗ್ಯ, ನೆಮ್ಮದಿ: ಸೆ.18ರಿಂದ ಉಚಿತ ಸಿದ್ಧ ಸಮಾಧಿ ಯೋಗ ಶಿಬಿರ




ಲಿಂಗಸುಗೂರು: ಸಾರ್ವಜನಿಕರ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವ ಉದ್ದೇಶದಿಂದ ಪಟ್ಟಣದಲ್ಲಿ ಸೆ.18ರಿಂದ 20ರವರೆಗೆ ಮೂರು ದಿನಗಳ ಉಚಿತ ಸಿದ್ಧ ಸಮಾಧಿ ಯೋಗ ಶಿಬಿರ ಆಯೋಜಿಸಲಾಗಿದೆ ಎಂದು ಯೋಗಗುರು ಜಿ. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಎಸ್‌ವೈ ಸಿದ್ಧ ಸಮಾಧಿ ಯೋಗ ಕೇಂದ್ರ ಧಾರವಾಡ ಹಾಗೂ ಪಂಚವಟಿ ಆಯುರ್ವೇದ ಯೋಗವನ ಲಿಂಗಸುಗೂರು ಇವರ ಸಹಯೋಗದಲ್ಲಿ, ಶ್ರೀ ರಿಷಿ ಪ್ರಭಾಕರ ಗುರೂಜಿ ಅವರ ಆಶೀರ್ವಾದದೊಂದಿಗೆ ಶಿಬಿರ ನಡೆಯಲಿದೆ ಎಂದರು.

ಪಂಚವಟಿ ಆಯುರ್ವೇದ ಯೋಗವನ, ಮಿನಿ ವಿಧಾನಸೌಧದ ಎದುರು, ಬೆಂಗಳೂರು ಬೈಪಾಸ್ ರಸ್ತೆಯಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಧ್ಯಾನ, ಪ್ರಾಣಾಯಾಮ, ಯೋಗಾಸನ, ವ್ಯಕ್ತಿತ್ವ ವಿಕಸನ, ಆಹಾರ ಪದ್ಧತಿ, ಜ್ಞಾನಯೋಗ ಹಾಗೂ ಪತಂಜಲಿ ಯೋಗದ ಕುರಿತು ತರಬೇತಿ ನೀಡಲಾಗುವುದು ಎಂದು ತಿಳಿಸಿದರು.

ಯೋಗಾಭ್ಯಾಸವು ದೈಹಿಕ ಆರೋಗ್ಯದ ಜತೆಗೆ ಒತ್ತಡ, ಚಿಂತೆ, ಭಯ ಹಾಗೂ ಅನಿದ್ರೆಯಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಸಹಕಾರಿಯಾಗಲಿದೆ. ವಿದ್ಯಾರ್ಥಿಗಳ ಏಕಾಗ್ರತೆ ಮತ್ತು ಜ್ಞಾಪಕಶಕ್ತಿ ವೃದ್ಧಿಗೆ, ಅಧಿಕಾರಿಗಳ ಕಚೇರಿ ಒತ್ತಡ ಕಡಿಮೆ ಮಾಡಲು, ವ್ಯಾಪಾರಸ್ಥರಿಗೆ ಮಾನಸಿಕ ನೆಮ್ಮದಿ ಹಾಗೂ ರೈತರಿಗೆ ಕೆಲಸದ ಚೈತನ್ಯ ಹೆಚ್ಚಿಸಲು ಯೋಗ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕರ್ನಾಟಕದ ವಿವಿಧೆಡೆ 24 ವರ್ಷಗಳ ಅನುಭವ ಹೊಂದಿರುವ ಧಾರವಾಡದ ಸಿದ್ಧ ಸಮಾಧಿ ಯೋಗ ಶಿಕ್ಷಕ ಜಿ. ಸುರೇಶ್ ಕುಮಾರ್ ಗುರೂಜಿ ಶಿಬಿರದ ನೇತೃತ್ವ ವಹಿಸಲಿದ್ದಾರೆ.

ಸಾರ್ವಜನಿಕರು, ಯೋಗಾಸಕ್ತರು ಹಾಗೂ ವಿವಿಧ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಕುಟುಂಬ ಸಮೇತರಾಗಿ ಶಿಬಿರದಲ್ಲಿ ಪಾಲ್ಗೊಂಡು ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಾ. ಪವಿತ್ರಾ ವಿರಕ್ತಮಠ, ಡಾ. ಶಶಿಕಾಂತ, ವೈದ್ಯ ಕುಮಾರಸ್ವಾಮಿ, ಜಗನ್ನಾಥ ಚಿತ್ತಾಪುರ ಹಾಗೂ ರವಿಕುಮಾರ್ ಸೂರ್ಯವಂಶಿ ಉಪಸ್ಥಿತರಿದ್ದರು.

ಹೆಚ್ಚಿನ ಮಾಹಿತಿಗೆ: 9964233272, 8073293691, 9481761533.

# ಪ್ರಚಾರದ ಕೊರತೆಯಿಂದ ಪ್ರಜಾ ಸೇವಾ ಆಂದೋಲನಕ್ಕೆ ಜನರ ನೀರಸ ಪ್ರತಿಕ್ರಿಯೆ



ದೇವದುರ್ಗ, ಸೆ.12: ರಾಜ್ಯ ಸರ್ಕಾರದ ಜನರಿಗಾಗಿ ಸರ್ಕಾರ ನಿಮ್ಮೊಂದಿಗೆ... ಜನಸೇವೆಯೇ ಜನರ ಬಲ ಘೋಷವಾಕ್ಯದಡಿ ಎಚ್. ಸಿದ್ದಾಪುರ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ದೇವದುರ್ಗ ತಾಲೂಕು ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿದರು. ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ರಾಧಾ, ಜಾಲಹಳ್ಳಿ ಪಿಎಸ್ಐ ವೈಶಾಲಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ದೇವದುರ್ಗ ಶಾಸಕಿ ಜಿ. ಕರಿಯಮ್ಮ ನಾಯಕ, ಸರ್ಕಾರದ ಯೋಜನೆಗಳು ಹಾಗೂ ಸೇವೆಗಳು ಗ್ರಾಮೀಣ ಭಾಗದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು. ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಅಧಿಕಾರಿಗಳೇ ಜನರ ಬಳಿಗೆ ಬಂದು ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಪ್ರಜಾ ಸೇವಾ ಆಂದೋಲನದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಯಿತು. ಗ್ರಾಮಸ್ಥರಿಂದ ಮೂಲಭೂತ ಸಮಸ್ಯೆಗಳಿಗೆ ಸಂಬಂಧಿಸಿದ ಮನವಿಗಳನ್ನು ಸ್ವೀಕರಿಸಿದ ಶಾಸಕರು, ಅವುಗಳನ್ನು ಶೀಘ್ರವಾಗಿ ಪರಿಶೀಲಿಸಿ ಇತ್ಯರ್ಥಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್ ಮಾತನಾಡಿ, ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಜನರು ತಮ್ಮ ಸಮಸ್ಯೆಗಳನ್ನು ಹೊತ್ತು ಕಾರ್ಯಕ್ರಮಕ್ಕೆ ಬರುತ್ತಿದ್ದು, ಸಾಧ್ಯವಾದಷ್ಟು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನಾಗರಿಕ ಸೇವೆಗಳು, ದಾಖಲೆಗಳ ವಿತರಣೆ, ಸಾಮಾಜಿಕ ಭದ್ರತೆ ಹಾಗೂ ಜನಕಲ್ಯಾಣ ಯೋಜನೆಗಳು ಸೇರಿದಂತೆ ಸರ್ಕಾರದ ಪ್ರಮುಖ ಸೇವೆಗಳನ್ನು ಒಂದೇ ವೇದಿಕೆಯಲ್ಲಿ ಜನರಿಗೆ ತಲುಪಿಸುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದರೂ, ಸಮರ್ಪಕ ಪ್ರಚಾರದ ಕೊರತೆಯಿಂದ ನಿರೀಕ್ಷಿತ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಲಿಲ್ಲ.

ಕಾರ್ಯಕ್ರಮಕ್ಕಾಗಿ ವಿವಿಧ ಇಲಾಖೆಗಳ ಸ್ಟಾಲ್‌ಗಳು ಹಾಗೂ ಬ್ಯಾನರ್‌ಗಳನ್ನು ಅಳವಡಿಸಲಾಗಿದ್ದರೂ, ಕೆಲವು ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರಿಗೆ ಸಮರ್ಪಕ ಮಾಹಿತಿ ನೀಡಲಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದರು.

"ಕಾರ್ಯಕ್ರಮ ನಡೆಯುತ್ತಿರುವ ಕುರಿತು ನಮಗೆ ಮುಂಚಿತವಾಗಿ ಮಾಹಿತಿ ನೀಡಿಲ್ಲ. ಸರಿಯಾದ ಪ್ರಚಾರ ನಡೆದಿದ್ದರೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸಿ ಸರ್ಕಾರದ ಸೇವೆಗಳ ಪ್ರಯೋಜನ ಪಡೆಯಬಹುದಾಗಿತ್ತು" ಎಂದು ಗ್ರಾಮಸ್ಥರು ದೂರಿದರು.

ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವ ಮುನ್ನ ಗ್ರಾಮಗಳಲ್ಲಿ ವ್ಯಾಪಕ ಪ್ರಚಾರ ಕೈಗೊಂಡು, ಸಾರ್ವಜನಿಕರಿಗೆ ಸಮಯ ಮತ್ತು ಸ್ಥಳದ ಕುರಿತು ಸೂಕ್ತ ಮಾಹಿತಿ ನೀಡಬೇಕು. ಆಗ ಮಾತ್ರ ಸರ್ಕಾರದ ಉದ್ದೇಶಿತ ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ತಲುಪಲು ಸಾಧ್ಯವಾಗುತ್ತದೆ ಎಂದು ಸಾರ್ವಜನಿಕರು ಒತ್ತಾಯಿಸಿದರು.

# ಸಂಸದ ಜಿ. ಕುಮಾರ ನಾಯಕ ಅವರ 63ನೇ ಜನ್ಮದಿನ: ಸೇವಾ ಕಾರ್ಯಗಳ ಮೂಲಕ ಅರ್ಥಪೂರ್ಣ ಆಚರಣೆ



ರಾಯಚೂರು: ಮಾಜಿ ಐಎಎಸ್ ಅಧಿಕಾರಿ ಹಾಗೂ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಅವರ 63ನೇ ಜನ್ಮದಿನವನ್ನು ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಯುವಕರು ಹಾಗೂ ಜಿ. ಕುಮಾರ ನಾಯಕ ಅಭಿಮಾನಿ ಬಳಗದ ವತಿಯಿಂದ ಸೇವಾ ಕಾರ್ಯಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಗರದ ಲಲಿತಾ ವೃದ್ಧಾಶ್ರಮದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಿ, ಅಲ್ಲಿನ ವೃದ್ಧರೊಂದಿಗೆ ಸಂಸದರ ಜನ್ಮದಿನದ ಸಂಭ್ರಮ ಹಂಚಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಜಿ. ಕುಮಾರ ನಾಯಕ ಅವರ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಜನಪರ ಸೇವಾ ಕಾರ್ಯಗಳಿಗೆ ಇನ್ನಷ್ಟು ಶಕ್ತಿ ದೊರೆಯಲಿ ಎಂದು ಹಾರೈಸಲಾಯಿತು. ಮುಂದಿನ ದಿನಗಳಲ್ಲಿಯೂ ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಕೊಡುಗೆ ನೀಡಲಿ ಎಂದು ಶುಭ ಕೋರಲಾಯಿತು.

ಬಳಿಕ ಯುವ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿ ಬಳಗದ ಸದಸ್ಯರು ರಾಯಚೂರಿನ ರಿಮ್ಸ್ ಹಾಗೂ ಓಪೆಕ್ ಆಸ್ಪತ್ರೆಗೆ ತೆರಳಿ, ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳು, ವೃದ್ಧರು ಹಾಗೂ ಬಡವರಿಗೆ ಹಣ್ಣು-ಹಂಪಲು ವಿತರಿಸಿದರು. ಆಸ್ಪತ್ರೆಯಲ್ಲಿ ದಾಖಲಾಗಿದ್ದ ರೋಗಿಗಳ ಆರೋಗ್ಯ ವಿಚಾರಿಸಿ, ಅವರೊಂದಿಗೆ ಆತ್ಮೀಯವಾಗಿ ಮಾತನಾಡಿ ಧೈರ್ಯ ತುಂಬಿದರು.

ಜನ್ಮದಿನವನ್ನು ಕೇವಲ ಕೇಕ್ ಕತ್ತರಿಸಿ ಸಂಭ್ರಮಿಸುವುದಕ್ಕೆ ಸೀಮಿತಗೊಳಿಸದೆ, ಸಮಾಜದ ದುರ್ಬಲ ಹಾಗೂ ನೆರವಿನ ಅಗತ್ಯವಿರುವ ಜನರೊಂದಿಗೆ ಸಂತಸ ಹಂಚಿಕೊಳ್ಳುವ ಮೂಲಕ ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುವ ಉದ್ದೇಶದಿಂದ ಈ ಸೇವಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಆಯೋಜಕರು ತಿಳಿಸಿದರು.

ಸಂಸದರ ಜನ್ಮದಿನವನ್ನು ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವ ಮೂಲಕ ಯುವ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಕುಮಾರ ನಾಯಕ ಅಭಿಮಾನಿ ಬಳಗದ ಸದಸ್ಯರು ಸಾಮಾಜಿಕ ಕಾಳಜಿಯನ್ನು ವ್ಯಕ್ತಪಡಿಸಿದರು. ಇಂತಹ ಸೇವಾ ಕಾರ್ಯಗಳು ಸಮಾಜದಲ್ಲಿ ಮಾನವೀಯತೆ, ಸಹಾನುಭೂತಿ ಹಾಗೂ ಪರಸ್ಪರ ಸಹಕಾರದ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಈ ಸಂದರ್ಭದಲ್ಲಿ ಅಭಿಪ್ರಾಯ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಮರಿಸ್ವಾಮಿ ಗಟ್ಟು ಬಿಚ್ಚಾಲಿ, ಅಸೆಂಬ್ಲಿ ಅಧ್ಯಕ್ಷ ಮಮ್ಮದ್ ಶೈಬಾಜ್, ಎಂ.ಡಿ. ಜಾಯ್ ಪ್ರತಾಪ್ ರೆಡ್ಡಿ, ವಿ. ರಾಜ್ ಮಂಚಾಲ್, ಸುಭಾಷ್, ಸಂಜುವ, ರಾಜು ರಾಂಪುರ್, ಮಧು ಕುಮಾರ್, ಯೇಸುದಾಸ, ಆಸೀಫ್, ಮೊಹಮ್ಮದ್ ರಫಿ, ದೇವಸೂಗೂರು ಬ್ಲಾಕ್ ಅಧ್ಯಕ್ಷ ಅಬ್ದುಲ್ ಗೌಸ್, ಅಭಿಷೇಕ್, ರಾಬರ್ಟ್ ಹೊಸೂರ್, ಮುಕ್ತಾರ್ ಹಾಗೂ ಕುಮಾರ ನಾಯಕ ಅಭಿಮಾನಿ ಬಳಗದ ಸದಸ್ಯರಾದ ಸೂರ್ಯ ಪ್ರಕಾಶ್, ಆರ್. ಈರಣ್ಣ, ಶ್ರೀನಿವಾಸ್ ರಾವ್, ಶೇಕ್ ಹುಸೇನ್, ರುದ್ರಮುನಿ ಸೇರಿದಂತೆ ಅನೇಕ ಯುವಕರು ಮತ್ತು ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ದುಗ್ಗಮ್ಮನಗುಂಡ ಶಾಲೆಯಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕಾ ಕಾರ್ಯಾಗಾರ



ಸಿಂಧನೂರು: ತಾಲೂಕಿನ ದುಗ್ಗಮ್ಮನಗುಂಡ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಜಿಲ್ಲಾ ಸಂಸ್ಥೆ ರಾಯಚೂರು, ಸ್ಥಳೀಯ ಸಂಸ್ಥೆ ಸಿಂಧನೂರು ಹಾಗೂ ಶ್ರೀ ಚಿಕ್ಕಯ್ಯ ಪಂಡಿತ್ ಕಬ್ ಘಟಕದ ಸಂಯುಕ್ತ ಆಶ್ರಯದಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿ ತಯಾರಿಕಾ ಕಾರ್ಯಾಗಾರ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಬ್ ಮಾಸ್ಟರ್ ಶಂಕರ ದೇವರು ಹಿರೇಮಠ, ಪ್ರತಿಯೊಬ್ಬರೂ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಹೇಳಿದರು.

ಇಕೋ ಕ್ಲಬ್ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆ, ನದಿಗಳು ಹಾಗೂ ಜಲಮೂಲಗಳ ಮಹತ್ವ ಕುರಿತು ಜಾಗೃತಿ ಮೂಡಿಸಲಾಯಿತು. ವಿಷಕಾರಿ ಬಣ್ಣಗಳು ಮತ್ತು ರಾಸಾಯನಿಕ ಲೇಪನ ಹೊಂದಿದ ಗಣೇಶ ಮೂರ್ತಿಗಳ ಬಳಕೆಯಿಂದ ನೀರಿನ ಮೂಲಗಳು ಕಲುಷಿತವಾಗುವುದರ ಜೊತೆಗೆ ಜಲಚರ ಜೀವಿಗಳಿಗೆ ಹಾನಿಯಾಗುತ್ತದೆ ಎಂದು ತಿಳಿಸಲಾಯಿತು.

ಮಣ್ಣಿನಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣಗಳನ್ನು ಬಳಸಿದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವುದರಿಂದ ನೀರಿನ ಮೂಲಗಳನ್ನು ಸಂರಕ್ಷಿಸಬಹುದು. ಮನೆಮನೆಗಳಲ್ಲಿಯೂ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಂತೆ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಲಾಯಿತು.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳಿಗೆ ಗಣೇಶ ಮೂರ್ತಿಗಳ ತಯಾರಿಕಾ ವಿಧಾನಗಳನ್ನು ಪ್ರಾಯೋಗಿಕವಾಗಿ ತಿಳಿಸಲಾಯಿತು. ವಿದ್ಯಾರ್ಥಿಗಳು ಆಸಕ್ತಿಯಿಂದ ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸಿದರು.

ನಂತರ ಗ್ರಾಮದಲ್ಲಿ ಜಾಥಾ ನಡೆಸಿ, ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಂತೆ ಗ್ರಾಮಸ್ಥರಿಗೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಗುರು ಶಂಕರ ದೇವರು ಹಿರೇಮಠ, ಅತಿಥಿ ಶಿಕ್ಷಕ ಪ್ರದೀಪ್ ಕುಮಾರ್, ಅಂಗನವಾಡಿ ಶಿಕ್ಷಕಿ ಭಾಗ್ಯಶ್ರೀ, ಮುಖ್ಯ ಅಡುಗೆಯವರಾದ ರೇಣುಕಾ, ಪಾಲಕಿ ಹನುಮಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚಿಕ್ಕಹೊನ್ನಕುಣಿಯಲ್ಲೇ ನೀರಾವರಿ ಇಲಾಖೆ ಉಳಿಸಿ: ಪ್ರಾಂತ ರೈತ ಸಂಘ ಆಗ್ರಹ



ದೇವದುರ್ಗ: ನಾರಾಯಣಪುರ ಬಲದಂಡೆ ಕಾಲುವೆಯ ಚಿಕ್ಕಹೊನ್ನಕುಣಿ ವಿಭಾಗ ಸಂಖ್ಯೆ6ರ ನೀರಾವರಿ ಇಲಾಖೆ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಕ್ರಮಕ್ಕೆ ಕರ್ನಾಟಕ ಪ್ರಾಂತ ರೈತ ಸಂಘದ ದೇವದುರ್ಗ ತಾಲೂಕು ಸಮಿತಿ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಕಚೇರಿಯನ್ನು ಚಿಕ್ಕಹೊನ್ನಕುಣಿಯಲ್ಲೇ ಮುಂದುವರಿಸಬೇಕು ಎಂದು ಆಗ್ರಹಿಸಿದೆ.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಸಂಘದ ತಾಲೂಕು ಅಧ್ಯಕ್ಷ ಹನುಮಂತ ಗುರಿಕಾರ ಹಾಗೂ ಕಾರ್ಯದರ್ಶಿ ಮೌನೇಶ ಜಾಲಹಳ್ಳಿ, ಚಿಕ್ಕಹೊನ್ನಕುಣಿಯಲ್ಲಿರುವ ನೀರಾವರಿ ಕಚೇರಿ ಸುತ್ತಮುತ್ತಲಿನ ಸಾವಿರಾರು ರೈತರಿಗೆ ನೇರ ಸಂಪರ್ಕದ ಕೇಂದ್ರವಾಗಿದೆ. ಕಾಲುವೆ ನಿರ್ವಹಣೆ, ನೀರು ಹರಿವು, ಕಾಲುವೆ ಒಡೆತ, ಬೆಳೆಗಳಿಗೆ ನೀರಿನ ಕೊರತೆ ಸೇರಿದಂತೆ ತುರ್ತು ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಪಡೆಯಲು ಈ ಕಚೇರಿ ಅನುಕೂಲವಾಗಿದೆ ಎಂದರು.

ನೀರಾವರಿ ಇಲಾಖೆ ರೈತರಿಗೆ ಅನುಕೂಲವಾಗುವಂತೆ ಕಾರ್ಯನಿರ್ವಹಿಸಬೇಕೇ ಹೊರತು, ರೈತರಿಂದ ದೂರವಾಗುವಂತಿಲ್ಲ. ನೀರು ನಿಲ್ಲುವುದು, ಕಾಲುವೆ ಒಡೆಯುವುದು ಅಥವಾ ಬೆಳೆಗಳು ಒಣಗುವಂತಹ ತುರ್ತು ಸಂದರ್ಭಗಳಲ್ಲಿ ರೈತರು ದೂರದ ರಾಯಚೂರಿಗೆ ಓಡಾಡುವುದು ಕಷ್ಟಕರವಾಗಲಿದೆ ಎಂದು ಅವರು ಹೇಳಿದರು.

ಆದ್ದರಿಂದ ವಿಭಾಗ ಸಂಖ್ಯೆ6ರ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಿ, ಚಿಕ್ಕಹೊನ್ನಕುಣಿಯಲ್ಲೇ ಮುಂದುವರಿಸಬೇಕು. ಇಲ್ಲವಾದಲ್ಲಿ ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಕರ್ನಾಟಕ ಪ್ರಾಂತ ರೈತ ಸಂಘದ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

# ರಾಜ್ಯ ಮಟ್ಟದ ಪ್ರತಿಭಾ ಸಿರಿ ಪ್ರಶಸ್ತಿಗೆ ರಾಣಿ ಅನುಶ್ರೀ ನಾಯಕ ಗೌಡೂರು ಆಯ್ಕೆ



ಹಟ್ಟಿ ಚಿನ್ನದ ಗಣಿ: ಸಮೀಪದ ಗೌಡೂರು ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಕುಮಾರಿ ರಾಣಿ ಅನುಶ್ರೀ, ತಂದೆ ರಾಜಲಕ್ಷ್ಮಣ ನಾಯಕ ಗೌಡೂರು, ಕರ್ನಾಟಕ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘ (ರಿ.) ರಾಜ್ಯ ಘಟಕದಿಂದ ನೀಡಲಾಗುವ ರಾಜ್ಯ ಮಟ್ಟದ ಪ್ರತಿಭಾ ಸಿರಿ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾರೆ.

ರಾಣಿ ಅನುಶ್ರೀ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾಗಿರುವುದು ಶಾಲೆ, ಪೋಷಕರು ಹಾಗೂ ಗೌಡೂರು ಗ್ರಾಮದ ಸಮಸ್ತ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಶಾಲಾ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ.

ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಧನೆಗಳನ್ನು ಮಾಡಿ ಶಾಲೆ, ಪೋಷಕರು ಹಾಗೂ ಗ್ರಾಮಕ್ಕೆ ಕೀರ್ತಿ ತರಲಿ ಎಂದು ಗ್ರಾಮಸ್ಥರು ಅಭಿನಂದಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಮುಖ್ಯ ಗುರುಗಳು, ಶಿಕ್ಷಕ ವೃಂದ ಹಾಗೂ ಇತರರು ಉಪಸ್ಥಿತರಿದ್ದರು.

# ಮಾನ್ವಿಯಲ್ಲಿ ವಿಶ್ವ ಜಾನಪದ ದಿನಾಚರಣೆ



ಮಾನ್ವಿ: ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಕನ್ನಡ ಜಾನಪದ ಪರಿಷತ್ತು ಬೆಂಗಳೂರು, ಕನ್ನಡ ಜಾನಪದ ಪರಿಷತ್ ರಾಯಚೂರು ಜಿಲ್ಲಾ ಘಟಕ, ತಾಲೂಕು ಘಟಕ ಹಾಗೂ ಮಹಿಳಾ ಘಟಕ ಮಾನ್ವಿ ಸಹಯೋಗದಲ್ಲಿ ವಿಶ್ವ ಜಾನಪದ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಕನ್ನಡ ಜಾನಪದ ಪರಿಷತ್ತು ಬೆಂಗಳೂರು ರಾಜ್ಯಾಧ್ಯಕ್ಷ ಹಾಗೂ ಭಾರತ ಸರ್ಕಾರದ ಐಸಿಸಿಆರ್ ಸದಸ್ಯ ಡಾ. ಜಾನಪದ ಎಸ್. ಬಾಲಾಜಿ ಉದ್ಘಾಟಿಸಿ ಮಾತನಾಡಿ, ವಿಶ್ವದ ವಿವಿಧ ದೇಶಗಳ ಜನಪದರು ತಮ್ಮ ಜನಪದ ಸಾಹಿತ್ಯ, ಕಲೆ ಮತ್ತು ಪರಂಪರೆಯನ್ನು ಸಂಭ್ರಮಿಸುವ ಉದ್ದೇಶದಿಂದ ವಿಶ್ವ ಜಾನಪದ ದಿನಾಚರಣೆ ಆಚರಿಸಲಾಗುತ್ತದೆ ಎಂದರು.

ನಮ್ಮ ದೇಶದಲ್ಲಿಯೇ ಕರ್ನಾಟಕದಲ್ಲಿ ಅತಿ ಹೆಚ್ಚು ಜನಪದ ಪ್ರಕಾರಗಳಿದ್ದು, 55 ಜನಪದ ಪ್ರಕಾರಗಳು, 257 ಜನಪದ ನೃತ್ಯ ಪ್ರಕಾರಗಳು ಹಾಗೂ 78 ಕಂದ ಕಾವ್ಯಗಳು ಸೇರಿದಂತೆ ವಿವಿಧ ಜನಪದ ಕಲೆಗಳನ್ನು ಗುರುತಿಸಲಾಗಿದೆ. ಜನಪದ ಸಾಹಿತ್ಯವನ್ನು ವಿಶೇಷವಾಗಿ ಮಹಿಳೆಯರು ಮೌಖಿಕ ಪರಂಪರೆಯ ಮೂಲಕ ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ ಎಂದು ಹೇಳಿದರು.

ಜನಪದ ಎಂದಿಗೂ ಅಳಿಯುವುದಿಲ್ಲ. ಕಾಲಾನುಕ್ರಮವಾಗಿ ತನ್ನ ಸ್ವರೂಪವನ್ನು ಬದಲಾಯಿಸಿಕೊಂಡು ಜನರ ನಡುವೆ ಉಳಿದುಕೊಳ್ಳುತ್ತದೆ. ಕನ್ನಡ ಜಾನಪದ ಪರಿಷತ್ತು ರಾಜ್ಯಾದ್ಯಂತ ಜನಪದ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪ್ರಚಾರ ಹಾಗೂ ಪ್ರಸಾರ ಮಾಡುವ ಮೂಲಕ ಉಳಿಸುವ ಕಾರ್ಯ ಮಾಡುತ್ತಿದೆ ಎಂದರು.

ಅ.7ರಂದು ಬೆಂಗಳೂರಿನಲ್ಲಿ ಮಹಿಳಾ ಜನಪದ ಸಮ್ಮೇಳನ ಆಯೋಜಿಸಲಾಗಿದ್ದು, ಜನಪದ ಸಾಹಿತ್ಯ, ಜನಪದ ಕ್ರೀಡೆಗಳು, ಗಾದೆಗಳು, ಒಗಟ್ಟುಗಳು, ಸೋಬಾನೆ ಪದಗಳು, ಜಡೆ ಹೆಣೆಯುವುದು, ಬಾಣಂತಿ ಪದಗಳು, ಜನಪದ ವೈದ್ಯ ಪದ್ಧತಿ, ಜನಪದ ವೇಷಭೂಷಣ, ಸ್ಥಳೀಯ ಭಾಷೆಗಳು, ಲಾವಣಿ, ಗೀಗಿ ಪದ ಸೇರಿದಂತೆ ವಿವಿಧ ಕಲಾ ಪ್ರಕಾರಗಳನ್ನು ಪರಿಚಯಿಸಲಾಗುವುದು ಎಂದು ತಿಳಿಸಿದರು.

ಅಲ್ಲದೆ ತೊಗಲುಗೊಂಬೆ, ಸೂತ್ರದ ಗೊಂಬೆ, ಮುಖವೀಣೆ, ಸುಡುಗಾಡು ಸಿದ್ಧರು ಹಾಗೂ ಸಿದ್ದಿ ಜನಾಂಗದ ಕಲೆಗಳನ್ನು ಮಹಿಳೆಯರು ಮತ್ತು ಮಕ್ಕಳಿಗೆ ಪರಿಚಯಿಸುವ ಕೆಲಸ ಮಾಡಲಾಗುವುದು. ಜನಪದ ಸಾಹಿತ್ಯ ಮತ್ತು ಕಲೆಗಳನ್ನು ಡಿಜಿಟಲೀಕರಣಗೊಳಿಸಿ ಮುಂದಿನ ಪೀಳಿಗೆಗೆ ಉಳಿಸುವ ಕಾರ್ಯವೂ ನಡೆಯುತ್ತಿದೆ ಎಂದು ಹೇಳಿದರು.

ಮಾನ್ವಿ ಆಯುಷ್ ವೈದ್ಯಾಧಿಕಾರಿ ಡಾ. ಅಂಬಿಕಾ ಮಧುಸೂದನ್ ವಿಶೇಷ ಉಪನ್ಯಾಸ ನೀಡಿ, ಜನಪದ ಹಾಡುಗಳನ್ನು ಹಾಡುವುದರಿಂದ ಹಾಗೂ ಕೇಳುವುದರಿಂದ ಮನಸ್ಸಿಗೆ ಮುದ ನೀಡುವ ಎಂಡಾರ್ಫಿನ್ ಹಾರ್ಮೋನ್ ಬಿಡುಗಡೆಯಾಗುತ್ತದೆ. ಜನಪದ ಹಬ್ಬಗಳು ಹಾಗೂ ಋತುಗಳಿಗೆ ಅನುಗುಣವಾದ ಆಹಾರ ಪದ್ಧತಿಗಳು ಆರೋಗ್ಯಕ್ಕೆ ಪೂರಕವಾಗಿವೆ ಎಂದರು.

ಹಿರಿಯರು ಅನುಸರಿಸಿಕೊಂಡು ಬಂದ ಆರೋಗ್ಯಕರ ಜೀವನ ಪದ್ಧತಿಗಳನ್ನು ಮುಂದುವರಿಸಬೇಕು. ಪರಿಸರ ಸ್ನೇಹಿ ಮಣ್ಣಿನ ಮಡಿಕೆಗಳು ಸೇರಿದಂತೆ ಸಾಂಪ್ರದಾಯಿಕ ವಸ್ತುಗಳ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಜಾನಪದ ಪರಿಷತ್ ರಾಯಚೂರು ಜಿಲ್ಲಾಧ್ಯಕ್ಷ ಡಾ. ಶರಣಪ್ಪ ಗೋನಾಳ್, ತಾಲೂಕು ಅಧ್ಯಕ್ಷ ತಾಯಪ್ಪ ಬಿ. ಹೊಸೂರು, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಕೆ. ವಿಜಯಲಕ್ಷ್ಮೀ, ಜಿಲ್ಲಾ ಕಾರ್ಯದರ್ಶಿ ದಂಡಪ್ಪ ಬಿರದಾರ್, ಮಾಜಿ ಪುರಸಭೆ ಸದಸ್ಯೆ ಲಕ್ಷ್ಮೀ ದೇವಿನಾಯಕ, ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ಇ. ನರಸಿಂಹ, ಪಕ್ಷಿಪ್ರೇಮಿ ಸಲ್ಲಾವುದ್ದೀನ್, ಯಂಕಣ್ಣ ಯಾದವ್, ಹೆಚ್.ಟಿ. ಪ್ರಕಾಶ್ ಬಾಬು, ನಾಗರಾಜ್ ಕೊಳ್ಳಿ, ಅರುಣಕುಮಾರ್ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K